# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

KANNADA POST

ಕನ್ನಡ ದಿನ ಪತ್ರಿಕೆ Kannada Daily

ಸಂಪಾದಕ : ಮಂಜು ಬನವಾಸೆ

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.01 | Issue. 192 | Pages. 2 | Date: 08-06-2025, SUNDAY RNI NO: KARKAN/2024/89601

ಸಂಪುಟ : 01 - ಸಂಚಿಕೆ : 192 - ಪುಟಗಳು : 2 - 08 ಜೂನ್ 2025 ಭಾನುವಾರ Ph: 8762954248 ದರ : ₹1


# ಬಿಡುವು ನೀಡಿದ ಮಳೆ: ಆಲೂಗೆಡ್ಡೆ ಬಿತ್ತನೆ ಚುರುಕು

## ಮತ್ತೆ ಮಳೆಯಾದರೆ ಸಂಕಷ್ಟ : ಬಿತ್ತನೆ ಬೀಜಕ್ಕೆ ಕೊರತೆಯಿಲ್ಲ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಕಳೆದ ಒಂದು ವಾರದಿಂದ ಜಿಲ್ಲಾದ್ಯಂತ ಮಳೆ ಅಬ್ಬರ ಕಡಿಮೆಯಾಗಿದ್ದು ಪ್ರಮುಖ ವಾಣಿಜ್ಯ ಬೆಳೆ ಆಲೂಗೆಡ್ಡೆ ಬಿತ್ತನೆಗೆ ರೈತರು ಉತ್ಸುಕತೆ ತೋರುತ್ತಿದ್ದಾರೆ.

ಮೇ 20 ರಿಂದ 30ರ ಅವಧಿಯಲ್ಲಿ ಆಲೂಗೆಡ್ಡೆ ಬಿತ್ತನೆಯಾಗಬೇಕಿತ್ತಾದರೂ ಎಡಬಿಡದೆ ಸುರಿದ ಮಳೆಯಿಂದ ಯಾವುದೇ ಕೃಷಿ ಚಟುವಟಿಕೆ ಕೈಗೊಳ್ಳಲು ಸಾಧ್ಯವಾಗಲಿಲ್ಲ. ಮಳೆ ಕಡಿಮೆಯಾಗದಿದ್ದರೆ ಮಾರುಕಟ್ಟೆಯಿಂದ ಖರೀದಿಸಿ ತಂದ ಬಿತ್ತನೆ ಆಲೂಗೆಡ್ಡೆ ಸಹ ವ್ಯರ್ಥವಾಗುತ್ತದೆ ಎಂಬ ಆತಂಕ ರೈತರನ್ನು ಕಾಡುತ್ತಿತ್ತು. ಆದರೆ ಈಗ ಮಳೆ ಸಂಪೂರ್ಣ ಬಿಡುವು ನೀಡಿ ಬಿಸಿಲು ಆವರಿಸಿದ್ದು ಬಿತ್ತನೆಗೆ ತಯಾರಿ ಮಾಡಿಕೊಂಡಿದ್ದ ರೈತರು ಕಾರ್ಯದಲ್ಲಿ ಮಗ್ನರಾಗಿದ್ದಾರೆ.

ಹಾಸನ ತಾಲ್ಲೂಕಿನ ಸಾಲಗಾಮೆ, ನಿಟ್ಟೂರು, ದುದ್ದ, ಅರಸೀಕೆರೆಯ ಗಂಡಸಿ, ಚನ್ನರಾಯಪಟ್ಟಣ ಬಾಗೂರು ವ್ಯಾಪ್ತಿಯಲ್ಲಿ ಬಿತ್ತನೆ ಕಾರ್ಯ ಚುರುಕಾಗಿದೆ ಎಂದು ತೋಟಗಾರಿಕೆ ಇಲಾಖೆ ಉಪನಿರ್ದೇಶಕಿ ಮಂಗಳಾ ಅವರು ತಿಳಿಸಿದ್ದಾರೆ.



### ಕಡಿಮೆ ಬೆಲೆಗೆ ಬಿತ್ತನೆ ಆಲೂ : ರೈತರ ಸಂತಸ

ಜಿಲ್ಲೆಯ ಪ್ರಮುಖ ವಾಣಿಜ್ಯ ಬೆಳೆಯಾಗಿರುವ ಆಲೂಗೆಡ್ಡೆಯನ್ನು ಮುಂಗಾರು ಅವಧಿಯಲ್ಲಿ ಕೈಗೊಳ್ಳುವುದು ವಾಡಿಕೆ. ಏಪ್ರಿಲ್‌ನಲ್ಲಿ ಬಿತ್ತನೆ ಆಲೂಗೆಡ್ಡೆ ಖರೀದಿಸಿ 10 ರಿಂದ 12 ದಿನ ಒಣಗಿಸಿ ನಂತರ ಹದ ಮಳೆಗೆ ಭೂಮಿ ಸಿದ್ಧಪಡಿಸಿಕೊಂಡು ಬಿತ್ತನೆ ಮಾಡುತ್ತಿದ್ದರು. ಇತ್ತೀಚೆಗೆ ಈ ಹಂತದಲ್ಲಿ ಭಾರೀ ವ್ಯತ್ಯಾಸಗಳಾಗಿದ್ದು ಮೇ 9 ರಿಂದ ಬಿತ್ತನೆ ಆಲೂಗೆಡ್ಡೆ ವಿತರಿಸಲಾಯಿತು. ಶೀತಲ ಗೃಹದಿಂದ ಬಿತ್ತನೆ ಆಲೂಗಡ್ಡೆ ತರುವುದರಿಂದ ಒಂದು ವಾರಗಳ ಕಾಲ ಅದನ್ನು ಒಣಗಿಸಬೇಕು. ಆ ಲೆಕ್ಕಾಚಾರದ ಪ್ರಕಾರ ಮೇ 20ರ ಬಳಿಕ ಬಿತ್ತನೆಗೆ ಸಿದ್ಧತೆ ಮಾಡಿಕೊಳ್ಳಲಾಗಿತ್ತು. ಆದರೆ ಪೂರ್ವ ಮುಂಗಾರು ಅಬ್ಬರಿಸಿದ ಹಿನ್ನೆಲೆಯಲ್ಲಿ ಸುಮಾರು 10 ದಿನಗಳಷ್ಟು ಬಿತ್ತನೆಯಲ್ಲಿ ವ್ಯತ್ಯಯವಾಗಿದೆ. ಇದು ಇಳುವರಿ ಮೇಲೆ ಪರಿಣಾಮ ಬೀರುವುದಿಲ್ಲವಾದರೂ ಇನ್ನು ಮುಂದೆ ಮಳೆಯಾದರೂ ಆಲೂಗೆಡ್ಡೆ ಭೂಮಿಯಲ್ಲೇ ಕರಗುವ ಸಾಧ್ಯತೆಯಿದೆ. ಧಾರಾಕಾರ ಮಳೆಗೆ ಭೂಮಿ ಭಾರೀ ತೇವಾಂಶದಿಂದ ಕೂಡಿದೆ. ಜೊತೆಗೆ ಬಿತ್ತನೆ ವೇಳೆ ರಾಸಾಯನಿಕ ಗೊಬ್ಬರವನ್ನು ಹಾಕುವುದರಿಂದ ಮಳೆಯಾದರೆ ಸಾವಿರಾರು ರೂ. ಖರ್ಚು ಮಾಡಿರುವ ಆಲೂಗಡ್ಡೆ ಮಣ್ಣಲ್ಲಿ ಮಣ್ಣಾಗುವ ಆತಂಕ ಹೆಚ್ಚಿದೆ. ಹೀಗಾಗಿ ಕನಿಷ್ಠ 15 ದಿನಗಳ ವರೆಗಾದರೂ ಮಳೆ ಬಿಡುವು ನೀಡಬೇಕೆಂದು ಪ್ರಾರ್ಥಿಸುತ್ತಿದ್ದಾರೆ. ಗುಣಮಟ್ಟದ ಬಿತ್ತನೆ ಆಲೂಗೆಡ್ಡೆ ದೊರೆತಿದ್ದು ಅಂಗಮಾರಿ ಸೇರಿ ಇತರ ಯಾವ ರೋಗಬಾಧೆಯು ತಗುಲದಿದ್ದರೆ ಉತ್ತಮ ಇಳುವರಿ ದೊರೆಯುವ ಆಶಾಭಾವ ರೈತರಲ್ಲಿ ಮೂಡಿದೆ.

### ಕಾಫಿಗೆ ಸಮಸ್ಯೆ ತಂದ ಮಳೆ

ಮಲೆನಾಡು ಭಾಗದಲ್ಲಿ ಸುರಿದ ಮುಂಗಾರು ಪೂರ್ವ ಭಾರೀ ಮಳೆ ಕಾಫಿ ಬೆಳೆಗಾರರನ್ನ ಸಂಕಷ್ಟಕ್ಕೆ ಸಿಲುಕಿಸಿದೆ. ಅವಧಿಗೆ ಮುನ್ನವೇ ಆರ್ಭಟಿಸಿದ ಮುಂಗಾರು, ಮೇ ಅಂತ್ಯದಲ್ಲಿ ಅಬ್ಬರಿಸಿ ಬೊಬ್ಬಿರಿದು ಫಸಲು ಕಟ್ಟೋ ವೇಳೆಯಲ್ಲೇ ಕೊಳೆ ರೋಗ ಅಂಟಿ ಕಂಟಕ ಎದುರಾಗಿದೆ. ಕಾಳುಮೆಣಸು, ಅಡಿಕೆ ಸೇರಿ ಹಲವು ಬೆಳೆಗಳಿಗೆ ಮಳೆ ಆಘಾತ ತಂದಿದೆ. ಇನ್ನು ಕಾಫಿಗೆ ಉತ್ತಮ ಬೆಳೆ ಇರುವ ಸಂದರ್ಭದಲ್ಲೇ ಮಳೆಯಿಂದ ಹಾನಿಯಾಗುವ ಆತಂಕ ಎದುರಾಗಿರುವುದು ಬೆಳೆಗಾರರನ್ನು ಕಂಗೆಡಿಸಿದೆ. ಅವಧಿಗೂ ಮುನ್ನವೇ ಸುರಿದ ಮುಂಗಾರು ಮಳೆ ದೊಡ್ಡ ಅನಾಹುತ ಸೃಷ್ಟಿಸಿದೆ. ಸತತ 10 ದಿನಗಳು ಸುರಿದ ಭಾರೀ ಮಳೆಗೆ ಜಿಲ್ಲೆಯ ಸಕಲೇಶಪುರ, ಆಲೂರು, ಬೇಲೂರು ತಾಲ್ಲೂಕಿನ ಕಾಫಿ ತೋಟಗಳಲ್ಲಿ ಕಾಫಿ ಫಸಲು ತೆನೆಕಟ್ಟುವ ವೇಳೆಯಲ್ಲೇ ಕೊಳೆಯುವ ಸ್ಥಿತಿ ನಿರ್ಮಾಣವಾಗಿದೆ. ನಿರಂತರ ಮಳೆಯಿಂದ ಹೆಚ್ಚಾದ ಶೀತದಿಂದ ಗೊಂಚಲು ಕೊಳೆ ರೋಗದಿಂದ ಕಾಫಿ ಬೆಳೆಗಾರರ ಕಣ್ಣಲ್ಲಿ ನೀರು ತರಿಸುತ್ತಿದೆ.

ಇನ್ನೊಂದೆಡೆ ಕಾಳು ಮೆಣಸಿಗೂ ಮಳೆ ಆಘಾತ ನೀಡಿದೆ. ಮಳೆ ಹೆಚ್ಚಾಗಿದ್ದರಿಂದ ಗಿಡದಲ್ಲಿಯೇ ಮೆಣಸು ಬಳ್ಳಿಗಳು ಕೊಳೆಯುತ್ತಿವೆ. ಅಡಿಕೆ ಫಸಲು ಕೂಡ ಸಂಪೂರ್ಣ ನಾಶವಾಗಿದೆ. ಜಿಲ್ಲೆಯ ಆಲೂರು, ಬೇಲೂರು, ಸಕಲೇಶಪುರದಲ್ಲಿ ಅತೀ ಹೆಚ್ಚಿನ ಮಳೆ ಸುರಿದು ಅಪಾರ ಪ್ರಮಾಣದ ಹಾನಿಯಿಂದ ರೈತರು ಸಂಕಷ್ಟಕ್ಕೆ ಒಳಗಾಗಿದ್ದಾರೆ.

### 5 ಸಾವಿರ ಹೆಕ್ಟೆರ್ ಬಿತ್ತನೆ ಗುರಿ

ವರ್ಷದಿಂದ ವರ್ಷಕ್ಕೆ ಜಿಲ್ಲೆಯಲ್ಲಿ ಆಲೂಗೆಡ್ಡೆ ಬಿತ್ತನೆ ಪ್ರದೇಶ ಕಡಿಮೆಯಾಗುತ್ತಿದೆ. ಈ ಬಾರಿ 5 ಸಾವಿರ ಹೆಕ್ಟೇರ್ ಗುರಿ ಹಾಕಿಕೊಂಡಿದ್ದು ಈಗ ಸುಮಾರು 1 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ. ಈ ವಾರದಲ್ಲಿ ಬಿತ್ತನೆ ಕಾರ್ಯ ಪೂರ್ಣಗೊಳ್ಳಲಿದೆ. ಅಗತ್ಯ ಬಿತ್ತನೆ ಆಲೂಗಡ್ಡೆ ಲಭ್ಯವಿದ್ದು ಶೇ. 90 ರಷ್ಟು ಮಾರಾಟವಾಗಿದೆ. ಪ್ರತಿ ಕ್ವಿಂಟಾಲ್‌ಗೆ 1,600 ರೂ.ನಂತೆ ಮಾರಾಟ ಮಾಡಲಾಗುತ್ತಿದೆ. ಮಳೆ ಆರಂಭಕ್ಕೂ ಮೊದಲೇ ರೈತರು ಬಿತ್ತನೆ ಆಲೂಗಡ್ಡೆ ಖರೀದಿಸಿದ್ದಾರೆ ಎಂದು ವರ್ತಕ ಗೋಪಾಲ್ ಅವರು ತಿಳಿಸಿದರು.

## ಇಂದು ಶ್ರವಣ ತಪಾಸಣೆ ಶಿಬಿರ




ಹಾಸನ: ನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನ ಆವರಣದಲ್ಲಿ ಜೂ. 8ರ ಭಾನುವಾರ ಬೆಳಿಗ್ಗೆ 10 ರಿಂದ ಸಂಜೆ 5ರ ವರೆಗೆ ಶ್ರವಣ ಉಚಿತ ತಪಾಸಣೆ ಹಾಗೂ ರಿಯಾಯಿತಿ ದರದಲ್ಲಿ ಶ್ರವಣ ಉಪಕರಣ ವಿತರಣೆ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ರೋಟರಿ ಕ್ಲಬ್ ಆಫ್ ಸೆಂಟ್ರಲ್ ಅಧ್ಯಕ್ಷ ಎಂ.ಡಿ. ನಾಗೇಶ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಶನಿವಾರ ಮಾತನಾಡಿ, ಟೀಮ್ ಈಶ್ವರ್ ಮಲ್ಪೆ ಅವರು ಅನೇಕ ಸಾಮಾಜಿಕ ಕಾರ್ಯ ಮಾಡಿಕೊಂಡು ಬಂದಿದ್ದು ಹಾಸನದಲ್ಲಿ ಶ್ರವಣ ಉಚಿತ ತಪಾಸಣೆ ಶಿಬಿರ ಹಮ್ಮಿಕೊಂಡಿದ್ದಾರೆ. ಅದಕ್ಕೆ ರೋಟರಿ ಕ್ಲಬ್ ಆಫ್ ಹಾಸನ ಸಹಕಾರ ನೀಡುತ್ತಿದೆ ಎಂದರು. ಶ್ರವಣ ಉಪಕರಣಗಳಿಗೆ ತಗುಲುವ ಶೇ. 40 ವೆಚ್ಚವನ್ನು ಟೀಮ್ ಈಶ್ವರ್ ಮಲ್ಪೆ ಭರಿಸುತ್ತಾರೆ. ಸಾರ್ವಜನಿಕರು ಈ ಕಾರ್ಯಕ್ರಮದ ಸದುಪಯೋಗ ಪಡೆಯಬೇಕು ಎಂದು ಹೇಳಿದರು.

ಶ್ರವಣ ಪರೀಕ್ಷೆಯ ಯಾವುದಾದರೂ ಹಳೆಯ ವರದಿ ಇದ್ದರೆ ತರಬೇಕು. ಮೊದಲು ನೋಂದಾಯಿಸುವ 40 ಜನರು ಸೌಲಭ್ಯಕ್ಕೆ ಅರ್ಹರು. ಅಂತಾರಾಷ್ಟ್ರೀಯ ಸಂಸ್ಥೆಯಲ್ಲಿ ಅನುಭವ ಪಡೆದಿರುವ ವೈದ್ಯರು ಶಿಬಿರದಲ್ಲಿ ಪಾಲ್ಗೊಳ್ಳಲಿದ್ದಾರೆ. ನೋಂದಣೆ ಅಥವಾ ಮಾಹಿತಿಗೆ 9902344399 ಇಲ್ಲಿಗೆ ಸಂಪರ್ಕಿಸಬಹುದು ಎಂದರು. ರೋಟರಿ ಕ್ಲಬ್ ಆಫ್ ಸೆಂಟ್ರಲ್ ಸದಸ್ಯ ಪ್ರಕಾಶ್, ಪತ್ರಕರ್ತರಾದ ನಾಗರಾಜ್ ಹೆತ್ತೂರು, ಬಿ.ಆರ್. ಬೊಮ್ಮೇಗೌಡ ಇತರರಿದ್ದರು.

## ಕಳವಿಗೆ ಅಸಹಕಾರ: ಚಾಕು ಇರಿತ

ಹಾಸನ: ಕಳ್ಳತನಕ್ಕೆ ಸಹಕಾರ ನೀಡಲಿಲ್ಲವೆಂದು ವ್ಯಕ್ತಿ ಮೇಲೆ ಚಾಕುವಿನಿಂದ ಹಲ್ಲೆ ನಡೆಸಿರುವ ಘಟನೆ ನಗರದ ಎನ್.ಆರ್. ವೃತ್ತದಲ್ಲಿರುವ ಆರ್ಯ ಪೆಗ್ ಬಾರ್ ಅಂಡ್ ರೆಸ್ಟೋರೆಂಟ್‌ನಲ್ಲಿ ನಡೆದಿದೆ.

ಚಿತ್ರದುರ್ಗ ಜಿಲ್ಲೆ ವೇಣುಕಲ್ ಗುಡ್ಡ ಗ್ರಾಮದ ಚಿತ್ರಲಿಂಗೇಶ್ವರ ಶಿವಣ್ಣ ಗಾಯಾಳು. ಹೊಳೆನರಸೀಪುರ ತಾಲ್ಲೂಕು ಒಡನಹಳ್ಳಿ ಗ್ರಾಮದ ಚೇತು ಆರೋಪಿ. ಚಿತ್ರಲಿಂಗೇಶ್ವರ ಹಾಸನದಲ್ಲೇ ಗುಜರಿ ಅಂಗಡಿಯಲ್ಲಿ ಕೆಲಸ ಮಾಡಿಕೊಂಡಿದ್ದು ಅದೇ ಕೆಲಸ ಮಾಡಿಕೊಂಡಿರುವ ಚೇತು ಜೊತೆಗೆ ಸಲುಗೆಯಿಂದ ಇದ್ದರು.

ಶುಕ್ರವಾರ ಸಂಜೆ 7.30ರ ಸಮಯದಲ್ಲಿ ಬಾರ್‌ಗೆ ಕರೆದುಕೊಂಡು ಹೋಗಿರುವ ಚೇತು ಮದ್ಯ ಹಾಗೂ ಊಟ ಕೊಡಿಸಿ ನಂತರ ಒಂದು ಕಡೆ ಕಬ್ಬಿಣ ಇದೆ ಅದನ್ನು ಇಬ್ಬರು ಸೇರಿ ಕುಯ್ದುಕೊಂಡು ಮಾರಾಟ ಮಾಡೋಣ ಎಂದಿದ್ದಾನೆ.

ಸಾವಿರಾರು ಜನರಿಂದ ಶಾಂತಿ ಮಂತ್ರ | ಜನಪ್ರತಿನಿಧಿಗಳು ಭಾಗಿ

# ಬಕ್ರೀದ್: ಮುಸ್ಲಿಂ ಬಾಂಧವರ ಸಾಮೂಹಿಕ ಪ್ರಾರ್ಥನೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರ ಸೇರಿ ಜಿಲ್ಲಾದ್ಯಂತ ಶನಿವಾರ ತ್ಯಾಗ ಬಲಿದಾನದ ಪ್ರತೀಕವಾದ ಬಕ್ರೀದ್ ಸಂಭ್ರಮವನ್ನು ಸಡಗರ ಸಂಭ್ರಮದಿಂದ ಅರ್ಥಪೂರ್ಣವಾಗಿ ಆಚರಿಸಲಾಯಿತು.

ನಗರದ ಹೊಸಲೈನ್ ರಸ್ತೆಯ ಹಳೇ ಈದ್ಗಾ ಮೈದಾನ ಮತ್ತು ಅಬ್ದುಲ್ ಕಲಾಂ ರಸ್ತೆ ಬಳಿ ಇರುವ ಹೊಸ ಈದ್ಗಾ ಮೈದಾನದಲ್ಲಿ ಮುಸ್ಲಿಂ ಬಾಂಧವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಹಳೇ ಈದ್ಗಾ ಮೈದಾನದಲ್ಲಿ ಬೆಳಿಗ್ಗೆ 8ಕ್ಕೆ ಮುಸ್ಲಿಂ ಬಾಂಧವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಸಂಸದ ಶ್ರೇಯಸ್ ಪಟೇಲ್ ಅವರು ಭೇಟಿಯಾಗಿ ಶುಭಾಶಯ ಕೋರಿದರು.

ಹಜರತ್ ಗುಜರಾತಿ ದರ್ಗಾ ಕಮಿಟಿ ಹಾಗೂ ಈದ್ಗಾ ಕಮಿಟಿ ಅಧ್ಯಕ್ಷ ಸಮೀರ್ ಖಾನ್ ಮಾತನಾಡಿ, ಸಮಸ್ತ ನಾಗರೀಕ ಬಂಧುಗಳಿಗೆ ಬಕ್ರೀದ್ ಹಬ್ಬದ ಅಂಗವಾಗಿ ತುಂಬು ಹೃದಯದ ಶುಭಾಶಯ ಹೇಳುತ್ತೇನೆ.

ದೇಶದಲ್ಲಿ ನಡೆಯುತ್ತಿರವ ಕೆಡಕುಗಳಿಗೆ ಅಂತ್ಯವಾಡಲು ದೇವರಲ್ಲಿ ಪ್ರಾರ್ಥನೆ ಮಾಡಿಕೊಂಡಿದ್ದೇವೆ. ಕೆಲ ದಿನಗಳ ಹಿಂದೆ ನಡೆದ ಘಟನೆಗಳು, ಮುಂದೆ ಸಂಭವಿಸದಂತೆ ಹಾಗೂ ನಾವುಗಳು ಸಹೋದರತ್ವ

ಮತ್ತು ಭ್ರಾತೃತ್ವದಿಂದ ಬದುಕಬೇಕು. ನಮ್ಮಲ್ಲಿ ಸಂಘರ್ಷ ಕಡಿಮೆ ಆಗಬೇಕು. ನಾವೆಲ್ಲಾ ಭಾರತೀಯರು, ಒಟ್ಟಾಗಿ ಬಾಳುವಂತಹ ಪರಿಸ್ಥಿತಿ ನಿರ್ಮಾಣವಾಗಬೇಕು ಎಂದು ಸಾಮೂಹಿಕ ಪ್ರಾರ್ಥನೆಯಲ್ಲಿ ಎಲ್ಲರೊಂದಿಗೂ ವಿಶ್ವ ಹಾಗೂ ದೇಶದ ಶಾಂತಿಗಾಗಿ ಅಲ್ಲಾನಲ್ಲಿ ಪ್ರಾರ್ಥಿಸಲಾಗಿದೆ ಎಂದರು.

ಬಕ್ರೀದ್ ಹಬ್ಬ ಎಂದರೇ ತ್ಯಾಗ ಬಲಿದಾನದ ಸಂಕೇತ. ಪ್ರವಾದಿ ಇಬ್ರಾಹಿಂ ಅವರು ತನ್ನ ಸ್ವಂತ ಮಗ ಪ್ರವಾದಿ ಇಸ್ಮಾಯಿಲ್ ಅವರನ್ನು ಬಲಿ ಕೊಡುವ ಸಂದರ್ಭ ಒದಗಿ ಬರುತ್ತದೆ. ಇಬ್ರಾಹಿಂ ಅವರನ್ನು ಪರೀಕ್ಷೆಗೆ ಒಳಪಡಿಸುವಂತಹ ಒಂದು ಸನ್ನಿವೇಶ. ಆ ಒಂದು ಪರೀಕ್ಷೆಯಲ್ಲಿ ಪ್ರವಾದಿ ಇಬ್ರಾಹಿಂರು ಉತ್ತೀರ್ಣರಾಗುತ್ತಾರೆ. ಆ ನೆನಪಿಗಾಗಿ ಪ್ರಾಣಿ ಬಲಿ ಕೊಡುತ್ತೇವೆ ಎಂದರು.

ಪ್ರಪಂಚದ ನಾನಾ ಮೂಲೆಗಳಿಂದ ಬಕ್ರೀದ್ ಹಬ್ಬದ ವೇಳೆ ಹಜ್ ಯಾತ್ರೆ ಕೈಗೊಳ್ಳುತ್ತಾರೆ. ಬಲಿ ಕೊಡುವ ಪ್ರಾಣಿಯ ಮಾಂಸವನ್ನು ಎಲ್ಲಾ ಬಡ ಜನರಿಗೆ ಆಹಾರವನ್ನು ಕೊಡುವುದು ಈ ಬಕ್ರೀದ್ ಹಬ್ಬದ ವೇಳೆ ನೆಡಯುತ್ತದೆ. ಈ ದೇಶದ ಪ್ರಗತಿಗಾಗಿ ಸೌಹಾರ್ದತೆಗಾಗಿ, ಸಹೋದರತ್ವಕ್ಕಾಗಿ ಪ್ರಾರ್ಥನೆ ಸಲ್ಲಿಸುವುದಾಗಿ ಹೇಳಿದರು.

ಬೇಲೂರು ವರದಿ: ಪಟ್ಟಣದ ಕೋಟೆ ಜಾಮಿಯಾ ಮಸೀದಿ ಮುಖ್ಯಸ್ಥರ ನೇತೃತ್ವದಲ್ಲಿ ಸಡಗರ ಸಂಭ್ರಮದಿಂದ ಬಕ್ರೀದ್ ಹಬ್ಬ ಆಚರಿಸಲಾಯಿತು.

ಈ ವೇಳೆ ಗೆಂಡೆಹಳ್ಳಿ ರಸ್ತೆಯ ಈದ್ಗಾ ಮೈದಾನದಲ್ಲಿ ಮುಸ್ಲಿಂ ಬಾಂಧವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಪುಟ್ಟ ಮಕ್ಕಳು, ಹಿರಿಯರು ಹೊಸ ಬಟ್ಟೆ ತೊಟ್ಟು, ಸಿಹಿ ಹಂಚಿ ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡದರು.

ಕೋಟೆ ಜಾಮಿಯಾ ಮಸೀದಿಯ ಮೌಲಾನಾ ರಿಜ್ವಾನ್ ರಾಜ ಅವರು ಮಾತನಾಡಿ, ಬಕ್ರೀದ್ ಹಬ್ಬ ತ್ಯಾಗ, ಶ್ರದ್ಧೆ ಮತ್ತು ಧರ್ಮ ನಿಷ್ಠೆಯ ಪ್ರತೀಕ ಎಂದರು.

ಬಕ್ರೀದ್ ಅಂದರೆ ಕೇವಲ ಹಬ್ಬವಲ್ಲ, ಅದು ಮಾನವೀಯತೆಯ, ನಿಷ್ಠೆಯ ಮತ್ತು ಪರಮ ಭಕ್ತಿಯ ಒಂದು ಪವಿತ್ರ ಸ್ಮರಣೆ. ಇದು ಇಬ್ರಾಹಿಂ (ಅಲೆಹಿಸ್ಸಾಲಮ್) ಅವರ ತ್ಯಾಗದ ಕತೆ, ತಮ್ಮ ಪ್ರೀತಿಯ ಮಗನನ್ನೇ ಸೃಷ್ಟಿಕರ್ತನ ಆದೇಶಕ್ಕಾಗಿ ಬಲಿ ನೀಡುತ್ತಾರೆ. ಈ ತ್ಯಾಗ ನಮಗೆ ಒಂದು ಮಹತ್ವದ ಸಂದೇಶ ನೀಡುತ್ತದೆ. ನಮ್ಮ ವಿಶ್ವಾಸ, ನಿಷ್ಠೆ ಮತ್ತು ಧರ್ಮದ ಮಾರ್ಗದಲ್ಲಿ ತ್ಯಾಗ ಮಾಡಲು ನಾವು ಸಿದ್ಧರಾಗಬೇಕು. ಈ ಪವಿತ್ರ ದಿನ ನಮ್ಮನ್ನು ಮಾನವೀಯ ಮೌಲ್ಯಗಳತ್ತ ಮತ್ತಷ್ಟು ಹತ್ತಿರಕ್ಕೆ ತೆಗೆದುಕೊಂಡು ಹೋಗಲಿ,

ಮನಸ್ಸಿನಲ್ಲಿ ಶ್ರದ್ಧೆ, ಮನೆಯಲ್ಲಿ ನೆಮ್ಮದಿ ಹಾಗೂ ಹೃದಯಗಳಲ್ಲಿ ಪರಸ್ಪರ ಪ್ರೀತಿ ಮತ್ತು ಸಹಾನುಭೂತಿ ಬೆಳೆಸಲಿ. ಇದು ಬರೀ ಹಬ್ಬದ ಸಡಗರವಲ್ಲ, ಬಕ್ರೀದ್ ಎನ್ನುವುದು ನೈತಿಕತೆಯ, ಸಮರ್ಪಣೆಯ ಹಬ್ಬ. ಇದು ಎಲ್ಲರನ್ನು ಒಂದೇ ದಾರಿ, ಒಂದೇ ನಂಬಿಕೆ, ಒಂದೇ ಮೌಲ್ಯಗಳ ಹಾದಿಯಲ್ಲಿ ನಡೆಯುವಂತೆ ಮಾಡುವ ಒಂದು ಗಂಭೀರ ಸಂದೇಶವಾಗಿದೆ. ನಮ್ಮ ಪೂರ್ವಜರು ನಡೆದ ಧರ್ಮದ, ತ್ಯಾಗದ ದಾರಿಯಲ್ಲಿ ನಾವು ಸಹ ಸಾಗೋಣ ಎಂದರು.

ಈ ಹಬ್ಬದಂದು ಕೇವಲ ಪ್ರಾಣಿ ಬಲಿ ನೀಡುವುದರಿಂದ ಹಬ್ಬ ಆಗುವುದಿಲ್ಲ. ಮೊದಲು ತಮ್ಮಲ್ಲಿರುವ. ಅಸಹನೆ ಪರಸ್ಪರ ದ್ವೇಷ. ಹೊಟ್ಟೆ ಕಿಚ್ಚು. ಬಡವರ ಹಕ್ಕು ಕಿತ್ತು ಕೊಳ್ಳುವುದು ಈ ದುಷ್ಟ ಭಾವನೆಗಳನ್ನು ಬಲಿ ಕೊಡಬೇಕು ಎಂದು ಕರೆ ನೀಡಿದರು. ಈ ವೇಳೆ ಬೇಲೂರು-ಹಳೇಬೀಡು ಪ್ರಾಧಿಕಾರದ ಅಧ್ಯಕ್ಷ ಸೈಯದ್ ತೌಫಿಕ್, ಕಾಂಗ್ರೆಸ್ ಮುಖಂಡ ಜಾಕೀರ್ ಪಾಷ, ನಯಾಜ್, ಗೆಂಡೆಹಳ್ಳಿ ಆಸಿಫ್, ಸಿಕಂದರ್ ಫಾಯಿಲ್, ತಬ್ರೆಸ್, ಆರೀಫ್, ಸೈಯದ್ ಜಮೀಲ್ ಹಾಗೂ ನೂರ್ ಅಹಮದ್ ಇದ್ದರು. ಯಾವುದೇ ಅಹಿತಕರ ಘಟನೆ ನಡೆಯದಂತೆ ಸರ್ಕಲ್ ಇನ್ಸ್ ಪೆಕ್ಟರ್ ರೇವಣ್ಣ, ಪಿಎಸ್ಐ ಶಿವನಗೌಡ ಪಾಟೀಲ್ ಅವರ ನೇತೃತ್ವದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ನೀಡಲಾಗಿತ್ತು.

ಹೊಳೆನರಸೀಪುರ: ಪಟ್ಟಣದ ಈದ್ಗಾ ಮೈದಾನದಲ್ಲಿ ಇಂದು ಮುಸ್ಲಿಂ ಬಾಂಧವರು ಪವಿತ್ರ ಬಕ್ರೀದ್ ಹಬ್ಬವನ್ನು ಸಾಮೂಹಿಕ ಪ್ರಾರ್ಥನೆ ಮಾಡುವ ಮೂಲಕ ಆಚರಣೆ ಮಾಡಿದರು. ಈ ಸಂದರ್ಭದಲ್ಲಿ ಮುಸ್ಲಿಂ ಧರ್ಮ ಗುರುಗಳಾದ ಆಲಿ ಮೌಲಾನಾ ಅವರು ಬಕ್ರೀದ್ ಹಬ್ಬದ ಪ್ರಯುಕ್ತ ವಿಶೇಷ ಪ್ರವಚನ ನೀಡಿದರು. ಸಾವಿರಾರು ಸಂಖ್ಯೆಯಲ್ಲಿ ಮುಸ್ಲಿಂ ಬಾಂಧವರು ಭಾಗವಹಿಸಿದ್ದರು.

# ಮಗ ಸಾಯಲಿ ಎಂದು ಸ್ಟೇಡಿಯಂಗೆ ಕಳಿಸಿರಲಿಲ್ಲ

## ಕಾಲ್ತುಳಿತದಲ್ಲಿ ಸಾವಿಗೀಡಾದ ಮೃತ ತಂದೆ ಆಕ್ರೋಶ | ನಿಲ್ಲದ ಕಣ್ಣೀರ ಕೋಡಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ಮಗ ಸಾಯಲಿ ಎಂದು ನನ್ನ ಮಗನನ್ನು ಸ್ಟೇಡಿಯಂಗೆ ಕಳಿಸಿರಲಿಲ್ಲ. ಸಾಮಾಜಿಕ ಜಾಲತಾಣಗಳಲ್ಲಿ ಕಮೆಂಟ್ ಮಾಡುವವರು ಇನ್ನಾದರೂ ಅರ್ಥ ಮಾಡಿಕೊಳ್ಳಿ ಎಂದು ಐಪಿಎಲ್ ವಿಜಯೋತ್ಸವ ಕಾಲ್ತುಳದಲ್ಲಿ ಮೃತಪಟ್ಟ ಇಂಜಿನೀಯರಿಂಗ್ ವಿದ್ಯಾರ್ಥಿ ಭೂಮಿಕ್ ಅವರ ತಂದೆ ಡಿ.ಟಿ. ಲಕ್ಷ್ಮಣ್ ಕಣ್ಣೀರು ಸುರಿಸಿದ್ದಾರೆ.

ತಾಲ್ಲೂಕಿನ ಕುಪ್ಪಗೋಡು ಗ್ರಾಮದ ತಮ್ಮ ಜಮೀನಿನಲ್ಲಿ ಮಗನ ಸಮಾಧಿ ಮೇಲೆ ವಿದ್ಯಾರ್ಥಿ ಭೂಮಿಕ್ ತಂದೆ ಡಿ.ಟಿ. ಲಕ್ಷ್ಮಣ್ ಬಿದ್ದು ಹೊರಳಾಡಿ ಕಣ್ಣೀರು ಸುರಿಸುತ್ತಿದ್ದಾರೆ.

ಮಗ ಪ್ರತ್ಯಕ್ಷವಾಗಲಿ ಎಂದು ಪ್ರಾರ್ಥಿಸುತ್ತಿದ್ದಾರೆ. ಪುತ್ರ ಶೋಕ ಮರೆಯುವಂತೆ ಸಂಬಂಧಿಕರು ಎಷ್ಟೇ ಸಮಾಧಾನ ಮಾಡಿದರೂ ಸುಮ್ಮನಿರಿಸಲು ಆಗುತ್ತಿಲ್ಲ.

ಭೂಮಿಕ್‌ನನ್ನು ಕಳೆದುಕೊಂಡು ತಂದೆ ಲಕ್ಷ್ಮಣ್ ಅನುಭವಿಸುತ್ತಿರುವ ನರಳಾಟ ಎಂತವರ ಕಣ್ಣಂಚಲ್ಲೂ ನೀರು ತರಿಸುತ್ತದೆ. ಲಕ್ಷ್ಮಣ್ ಅವರು 20 ವರ್ಷಗಳ ಹಿಂದೆ ಬೆಂಗಳೂರು ಸೇರಿ ಕೈಗಾರಿಕೋದ್ಯಮ ನಡೆಸುತ್ತಾ ಶ್ರೀಮಂತರಾದವರು. ಏನೇ ಆಸ್ತಿ ಗಳಿಸಿದರೂ ಮಗನಿಗಾಗಿ ಎನ್ನುತ್ತಿದ್ದ ಅವರಿಗೆ ಈಗ ಮಗನ ಅಗಲಿಕೆಯ ವಿಚಾರವನ್ನು ಸಹಿಸಲು ಸಾಧ್ಯವಾಗುತ್ತಿಲ್ಲ.



### ಸಿಎಂ, ಡಿಸಿಎಂ ರಾಜೀನಾಮೆ ನೀಡಲಿ

ಕಾಲ್ತುಳಿದ ಪ್ರಕರಣ ಸಂಬಂಧ ಸರ್ಕಾರ ತಾನು ಬಚಾವಾಗಲು ಐವರು ಪೊಲೀಸ್ ಅಧಿಕಾರಿಗಳನ್ನು ಅಮಾನತು ಮಾಡಿದೆ. ನನ್ನ ಮಗನನ್ನುಆಸ್ಪತ್ರೆಗೆ ಎತ್ತಿಕೊಂಡು ಹೋಗಿದ್ದೇ ಪೊಲೀಸರು. ಅವರೇ ಭೂಮಿಕ್‌ನನ್ನು ಆಸ್ಪತ್ರೆಗೆ ಸೇರಿಸಿದ್ದರು. ಪೊಲೀಸರ ಮೇಲೆ ಕ್ರಮ ಕೈಗೊಳ್ಳುವ ಬದಲು ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗು ಗೃಹ ಸಚಿವರು ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು.

### ಸರ್ಕಾರದ ನಿರ್ಲಕ್ಷ್ಯಕ್ಕೆ ಸಾವು

ನನ್ನ ಮಗ ಕಾಲೇಜಿಗೆ ಹೋಗಿದ್ದ. ಅವನಿಗೆ ಕ್ರಿಕೆಟ್ ಬಗ್ಗೆ ಆಸಕ್ತಿ ಇರಲಿಲ್ಲ. ಐಪಿಎಲ್ ಕ್ರೀಡಾಪಟುಗಳು ಬೆಂಗಳೂರಿಗೆ ಬರುತ್ತಿದ್ದಾರೆಂದು ಸ್ನೇಹಿತರ ಜೊತೆಗೂಡಿ ನೋಡಲು ತೆರಳಿದ್ದ. ಯಾವ ತಂದೆ ತಾಯಿಯು ತನ್ನ ಮಕ್ಕಳು ಸಾಯಲಿ ಎಂದು ಕಳಿಸೋದಿಲ್ಲ ಎಂದು ಬಿಕ್ಕಿ ಬಿಕ್ಕಿ ಅತ್ತರು. ಐಪಿಎಲ್ ವಿಜಯೋತ್ಸವ ಆಯೋಜನೆ ಮಾಡಿದ ಸರ್ಕಾರಕ್ಕೆ ಸರಿಯಾದ ವ್ಯವಸ್ಥೆ ಮಾಡಲು ಆಗಲಿಲ್ಲವೇ. ಸರ್ಕಾರದ ಎಡವಟ್ಟಿನಿಂದ 11 ಮಕ್ಕಳ ತಂದೆ-ತಾಯಂದಿರು ಅನಾಥರಾಗಿದ್ದಾರೆ. ಮಕ್ಕಳನ್ನು ಕಳೆದುಕೊಂಡಿರುವುದಕ್ಕೆ ಸರ್ಕಾರವೇ ನೇರ ಹೊಣೆ. ಸರಿಯಾದ ವ್ಯವಸ್ಥೆ ಮಾಡಿದ್ದರೆ ಹೀಗಾಗುತ್ತಿರಲಿಲ್ಲ ಎಂದು ಹೇಳಿದರು.

### ಬಡವರ ಮಕ್ಕಳ ಹೆಣ, ಅವರ ಮಕ್ಕಳ ಫೋಟೊ

ಮುಖ್ಯಮಂತ್ರಿ, ಉಪಮುಖ್ಯಮಂತ್ರಿಗೆ ಆ ಸ್ಥಾನದಲ್ಲಿ ಕುಳಿತುಕೊಳ್ಳುವ ಯೋಗ್ಯತೆ ಇಲ್ಲ. ಆ್ಯಂಬುಲೆನ್ಸ್ ಇಲ್ಲದೆ ನನ್ನ ಮಗ ಒದ್ದಾಡಿ ಒದ್ದಾಡಿ ಸತ್ತಿದ್ದಾನೆ. ಅಷ್ಟು ದೊಡ್ಡ ಕಾರ್ಯಕ್ರಮ ಮಾಡುವವರು ಮುಂಜಾಗ್ರತೆಯನ್ನು ಕೈಗೊಳ್ಳಬೇಕಿತ್ತಲ್ಲವೇ. ಅವನ ಸ್ನೇಹಿತ ಕೈ ಕಾಲು ಹಿಡಿದು ಹೇಗೋ ಕರೆದೊಯ್ದಿದ್ದಾನೆ. ಸ್ಥಳದಲ್ಲಿ ಆ್ಯಂಬುಲೆನ್ಸ್ ಇದ್ದಿದ್ದರೆ ಮಗ ಬದುಕಿರುತ್ತಿದ್ದ. ರಾಜಕಾರಣಿಗಳು ತಮ್ಮ ಪಾಡಿಗೆ ಮಕ್ಕಳು ಮೊಮ್ಮಕ್ಕಳೊಂದಿಗೆ ಕಪ್ ಹಿಡಿದು ಫೋಟೊ ತೆಗೆಸಿಕೊಳ್ಳುತ್ತಿದ್ದರು. ಹೊರಗಡೆ ನಮ್ಮ ಮಕ್ಕಳು ಸಾಯುತ್ತಿದ್ದರು ಎಂದು ಹಿಡಿಶಾಪ ಹಾಕಿದರು.

## ಕಾರಿನಲ್ಲಿಟ್ಟಿದ್ದ 6.30 ಲಕ್ಷ ರೂ. ಕಳವು

ಅರಸೀಕೆರೆ: ಕಾರಿನಲ್ಲಿ ಹಣವಿಟ್ಟು ಬಾಗಿಲು ಲಾಕ್ ಮಾಡದೆ ಹೋಗಿದ್ದರಿಂದ ಕಳ್ಳರು ಬಾಗಿಲು ತೆರೆದು 6.30 ಲಕ್ಷ ರೂ. ಕದ್ದಿರುವ ಘಟನೆ ನಗರದಲ್ಲಿ ನಡೆದಿದೆ.

ತಮಿಳುನಾಡಿನ ತಿರುಪರ್ ಜಿಲ್ಲೆ ಶಿವಗಿರಿ ಪುತ್ತೂರು ಗ್ರಾಮದ ಸುರೇಶ ಹಣ ಕಳೆದುಕೊಂಡವರು. ಕಳೆದ ಒಂಬತ್ತು ವರ್ಷಗಳಿಂದ ನಗರದ ಎಪಿಎಂಸಿಯಲ್ಲಿ ಕೊಬ್ಬರಿ ಅಂಗಡಿ ಇಟ್ಟುಕೊಂಡಿರುವ ಇವರು ಜೂ. 4 ರಂದು ಫೆಡರಲ್ ಬ್ಯಾಂಕ್‌ನಲ್ಲಿ 6 ಲಕ್ಷ ರೂ. ಹಣ ಡ್ರಾ ಮಾಡಿ ತಮ್ಮ ಜೊತೆಗಿದ್ದ 30 ಸಾವಿರ ರೂ. ಸೇರಿಸಿ ಕಾರಿನಲ್ಲಿಟ್ಟಿದ್ದರು. ಅಲ್ಲಿಂದ ಎಪಿಎಂಸಿಗೆ ತೆರಳಿದ ಸುರೇಶ್ ಡೋರ್ ಲಾಕ್ ಮಾಡದೆ ಅಂಗಡಿಗೆ ತೆರಳಿದಾಗ ಅದನ್ನು ನೋಡಿದ ಕಳ್ಳರು ಯಾರಿಗೂ ಸಂಶಯ ಬಾರದಂತೆ ಕಾರಿನ ಬಾಗಿಲು ತೆರೆದು ಹಣ ಕದ್ದು ಪರಾರಿಯಾಗಿದ್ದಾರೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಅಪಘಾತದಲ್ಲಿ 7 ವರ್ಷದ ಬಾಲಕ ಸಾವು

ಅರಸೀಕೆರೆ: ತಾಲ್ಲೂಕಿನ ಗಂಡಸಿ ಗ್ರಾಮದಲ್ಲಿ ಕೆಎಸ್ಆರ್‌ಟಿಸಿ ಬಸ್ ಡಿಕ್ಕಿಯಾಗಿ ಬೈಕ್‌ನಲ್ಲಿ ಪ್ರಯಾಣಿಸುತ್ತಿದ್ದ 7 ವರ್ಷದ ಬಾಲಕ ಮೃತಪಟ್ಟಿದ್ದಾನೆ.

ಬೆಂಗಳೂರಿನ ಸುಬ್ರಹ್ಮಣ್ಯ ಪುರಂ ನಿವಾಸಿ ನಟರಾಜ ಅವರ ಮಗ ಪೃಥ್ವಿರಾಜ್ ಮೃತ ದುರ್ದೈವಿ. ಬೇಸಿಗೆ ರಜೆ ಹಿನ್ನೆಲೆಯಲ್ಲಿ ನಟರಾಜ್ ಅವರು ತಮ್ಮ ಪುತ್ರನನ್ನು ಸಂಬಂಧಿ ದಾಸೇನಹಳ್ಳಿ ಗ್ರಾಮದ ಮಲ್ಲಿಕಾರ್ಜುನ ಅವರ ಮನೆಗೆ ಕಳುಹಿಸಿದ್ದರು. ಜೂ. 5 ರಂದು ಮಲ್ಲಿಕಾರ್ಜುನ ಸಂತೆಗೆಂದು ಬಾಲಕನೊಂದಿಗೆ ಬೈಕ್‌ನಲ್ಲಿ ತೆರಳಿದ್ದರು. ಗಂಡಸಿ ಗ್ರಾಮದ ಎಸ್‌ಬಿಐ ಬ್ಯಾಂಕ್ ಮುಂಭಾಗ ಹೋಗುತ್ತಿದ್ದಾಗ ಹಿಂದಿನಿಂದ ಜೋರಾಗಿ ಬಂದ ಕೆಎಸ್ ಆರ್‌ಟಿಸಿ ಬಸ್‌ನ ಹಿಂಭಾಗ ಬೈಕ್ ಹ್ಯಾಂಡಲ್‌ಗೆ ತಾಗಿ ರಸ್ತೆ ಮೇಲೆ ಬಿದ್ದಿದ್ದಾರೆ. ಅಪಘಾತದ ರಭಸಕ್ಕೆ ಪೃಥ್ವಿರಾಜ್ ಮೃತಪಟ್ಟರೆ ಮಲ್ಲಿಕಾರ್ಜುನ ಅವರ ಕಾಲು ಮುರಿದಿದೆ. ಗಂಡಸಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಜೂ. 10ಕ್ಕೆ ಸಮಸ್ಯೆ ಮಾರ್ಗದರ್ಶನ ಕಾರ್ಯಕ್ರಮ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಪಟ್ಟಣದ ಸಾವಿತ್ರಮ್ಮ ಕರಿಯಪ್ಪಗೌಡ ಕಲ್ಯಾಣ ಮಂಟಪದಲ್ಲಿ ಜೂ. 10ರ ಮಂಗಳವಾರ ಮಹಾರಾಷ್ಟ್ರದ ರಮಾನಂದಚಾರ್ಯ ದಕ್ಷಿಣಪೀಠ ಶ್ರೀ ಸ್ವಾಮಿ ನರೇಂದ್ರ ಚಾರ್ಯಜಿ ಮಹಾರಾಜ ಶ್ರೀಗಳಿಂದ ಸಮಸ್ಯೆ ಮಾರ್ಗದರ್ಶನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಾಲ್ಲೂಕು ಸ್ವಸ್ವರೂಪ ಸಂಪ್ರದಾಯ ಭಕ್ತ ಸೇವಾ ಸಮಿತಿ ಅಧ್ಯಕ್ಷ ಭುವನಹಳ್ಳಿ ಯೋಗೇಶ್ ತಿಳಿಸಿದರು.

ತಾಲ್ಲೂಕಿನ ಹೊನ್ನಮಾರನಹಳ್ಳಿ ಗ್ರಾಮದಲ್ಲಿ ಶನಿವಾರ ಮನೆ ಮನೆಗೆ ತೆರಳಿ ಕಾರ್ಯಕ್ರಮದ ಪ್ರಚಾರ ಕಾರ್ಯಕ್ರಮದಲ್ಲಿ ಮಾತನಾಡಿದರು.

ಶಾಸಕ ಸಿ.ಎನ್. ಬಾಲಕೃಷ್ಣ ಅವರ ಮಾರ್ಗದರ್ಶನದಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಮಹಾರಾಷ್ಟ್ರದ ದಕ್ಷಿಣ ಪೀಠದ ಶ್ರೀ ಸ್ವಾಮಿ ನರೇಂದ್ರಾಚಾರ್ಯಜಿ ಮಹಾರಾಜ ಶ್ರೀಗಳಿಂದ ಸಮಸ್ಯೆ ಮಾರ್ಗದರ್ಶನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜೂನ್ 10ರ ಮಂಗಳವಾರ ಬೆಳಗ್ಗೆ 9ಗಂಟೆಗೆ ಕಾರ್ಯಕ್ರಮ ಪ್ರಾರಂಭಗೊಳ್ಳಲಿದೆ ಎಂದರು.



ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಮನವಿ ಮಾಡಿದರು. ಇದೇ ಸಂದರ್ಭದಲ್ಲಿ ಸಮಸ್ಯೆ ಮಾರ್ಗದರ್ಶನ ಕಾರ್ಯಕ್ರಮದ ಪ್ರಚಾರದ ವಾಹನಕ್ಕೆ ಗ್ರಾಮದಲ್ಲಿ ಚಾಲನೆ ನೀಡಲಾಯಿತು.

ಜಗದ್ಗುರು ರಮಾನಂದಚಾರ್ಯ ದಕ್ಷಿಣ ಪೀಠ ಸ್ವಸ್ವರೂಪ ಸಂಪ್ರದಾಯ ಬೆಂಗಳೂರು ಭಕ್ತ ಸೇವಾ ಸಮಿತಿ ಜಿಲ್ಲಾ ನಿರೀಕ್ಷಕ ಬಾಲ ಸಾಹೇಬ್ ಪೇಳು, ಜಿಲ್ಲಾಧ್ಯಕ್ಷ ಮಹದೇವ್ ನಿಕ್ಕಂ, ಸದಸ್ಯ ಜಗದೀಶ್ ಬೋಜೆ, ನುಗ್ಗೇಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಎಚ್.ಬಿ. ವಿಠ್ಠಲ್ ಕುಮಾರ್, ಕೃಷಿ ಪತ್ತಿನ ಮಾಜಿ ಅಧ್ಯಕ್ಷ, ನಿರ್ದೇಶಕ ಹುಲಿಕೆರೆ ಸಂಪತ್ ಕುಮಾರ್, ಮುಖಂಡರಾದ ಕಿಟ್ಟಣ್ಣ, ಜಂಬೂರ್ ಮಹೇಶ್, ದೊಡ್ಡನ್ನಿ ಸತೀಶ್, ಪಿ.ದಾಸಪುರ ಮಂಜುನಾಥ್ ಹಾಗೂ ಇತರರಿದ್ದರು.

# ಶವಾಗಾರ ನಿರ್ಮಾಣಕ್ಕೆ 50 ಲಕ್ಷ ರೂ. ಬಿಡುಗಡೆ

## ರಕ್ತದಾನ ಶಿಬಿರದಲ್ಲಿ ಶಾಸಕ ಬಾಲಕೃಷ್ಣ | ಹೆಚ್ಚುವರಿ ಅನುದಾನಕ್ಕೆ ಮನವಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ನುಗ್ಗೇಹಳ್ಳಿ ಸಮುದಾಯ ಆರೋಗ್ಯ ಕೇಂದ್ರ ದುರಸ್ತಿ ಹಾಗೂ ನೂತನ ಶವಾಗಾರ ನಿರ್ಮಾಣಕ್ಕೆ 50 ಲಕ್ಷ ರೂ. ಅನುದಾನ ಬಿಡುಗಡೆ ಮಾಡಲಾಗಿದೆ ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಹೇಳಿದರು.



ತಾಲ್ಲೂಕಿನ ನುಗ್ಗೇಹಳ್ಳಿ ಸಮುದಾಯ ಆರೋಗ್ಯ ಕೇಂದ್ರದ ಆವರಣದಲ್ಲಿ ಗ್ರಾಮ ಪಂಚಾಯಿತಿ, ಸಮುದಾಯ ಆರೋಗ್ಯ ಕೇಂದ್ರ ಹಾಗೂ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ತಾಲ್ಲೂಕು ಘಟಕ ಚನ್ನರಾಯಪಟ್ಟಣ ವತಿಯಿಂದ ಶುಕ್ರವಾರ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಾಗೂ ಬೃಹತ್ ರಕ್ತದಾನ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಹೋಬಳಿಯ ಜನರಿಗೆ ಉತ್ತಮ ಆರೋಗ್ಯ ಸೇವೆ ಸಿಗಲೆಂದು ನನ್ನ ಹಿಂದಿನ ಅವಧಿಯಲ್ಲಿ ಸುಮಾರು 5 ಕೋಟಿ ರೂ. ವೆಚ್ಚದಲ್ಲಿ ಸುಸಜ್ಜಿತ ಕಟ್ಟಡ ನಿರ್ಮಾಣ ಮಾಡಲಾಗಿತ್ತು. ಇದರಿಂದ ಈ ಭಾಗದ ಜನರಿಗೆ ಆರೋಗ್ಯ ಸೇವೆ ಸಿಗುತ್ತಿದೆ ಎಂದರು.

ತಾಲ್ಲೂಕಿನ ವಿವಿಧ ಆಸ್ಪತ್ರೆಗಳ ನವೀಕರಣಕ್ಕೆ ಹಾಗೂ ಅಭಿವೃದ್ಧಿ ಕೆಲಸಗಳಿಗೆ ಹಣ ಬಿಡುಗಡೆ ಮಾಡುವಂತೆ ಆರೋಗ್ಯ ಸಚಿವರಿಗೆ ಮನವಿ ಮಾಡಲಾಗಿತ್ತು.

ಸರ್ಕಾರ ಹೋಬಳಿ ಕೇಂದ್ರದ ಸಮುದಾಯ ಆರೋಗ್ಯದ ಹಳೆಯ ಕಟ್ಟಡ ದುರಸ್ತಿ ಹಾಗೂ ಶವಗಾರ ನಿರ್ಮಾಣಕ್ಕೆ 50 ಲಕ್ಷ ರೂ. ಅನುದಾನ ಬಿಡುಗಡೆ ಮಾಡಿದೆ. ಸದ್ಯದಲ್ಲೇ ಕಾಮಗಾರಿಗೆ ಚಾಲನೆ ನೀಡಲಾಗುವುದು ಎಂದು ತಿಳಿಸಿದರು.

ಆರೋಗ್ಯ ಕೇಂದ್ರಕ್ಕೆ ಪ್ರತಿನಿತ್ಯ ಡಯಾಬಿಟಿಸ್ ರೋಗಿಗಳು ಹೆಚ್ಚಿನ ಸಂಖ್ಯೆಯಲ್ಲಿ ಬರುವುದರಿಂದ ಎಬಿಆರ್‌ಕೆ ಅನುದಾನ ಬಳಸಿ ಎಚ್ಎಐಸಿ ಪರೀಕ್ಷಾ ಯಂತ್ರವನ್ನು ಸದ್ಯದಲ್ಲೇ ಖರೀದಿಸುವಂತೆ ಆಸ್ಪತ್ರೆಯ ಆಡಳಿತ ಅಧಿಕಾರಿಗಳಿಗೆ ತಿಳಿಸಲಾಗಿದೆ.

ಇದರಿಂದ ಡಯಾಬಿಟಿಸ್ ರೋಗಿಗಳಿಗೆ ಹೆಚ್ಚು ಅನುಕೂಲವಾಗಲಿದೆ. ಸದ್ಯ ಆಸ್ಪತ್ರೆಯಲ್ಲಿ ಸ್ಟಾಫ್ ನರ್ಸ್ ಹುದ್ದೆ ಖಾಲಿ ಇದ್ದು ಈ ಬಗ್ಗೆ ಜಿಲ್ಲಾ ಆರೋಗ್ಯ ಅಧಿಕಾರಿಗಳಿಗೆ ತಿಳಿಸಿ ಖಾಲಿ ಹುದ್ದೆ ತುಂಬಿಸಲು ಪ್ರಯತ್ನಿಸಲಾಗುವುದು ಎಂದು ಭರವಸೆ ನೀಡಿದರು.

ಕೋವಿಡ್ ಹಾಗೂ ತುರ್ತು ಆರೋಗ್ಯ ಪರಿಸ್ಥಿತಿಯಲ್ಲಿ ಆಶಾ ಕಾರ್ಯಕರ್ತೆಯರು ಹೆಚ್ಚಿನ ಶ್ರಮವಹಿಸಿ ಕೆಲಸ ನಿರ್ವಹಿಸುತ್ತಾರೆ. ಅವರ ವೇತನ ಹೆಚ್ಚಳ ಮಾಡುವಂತೆ ಕಳೆದ ಅಧಿವೇಶನದಲ್ಲಿ ಸರ್ಕಾರದ ಗಮನ ಸೆಳೆಯಲಾಗಿತ್ತು. ಆದರೆ ಸರ್ಕಾರ ಕೇವಲ 1 ಸಾವಿರ ರೂ. ಮಾತ್ರ ಹೆಚ್ಚಳ ಮಾಡಿದೆ. ಮಾಸಿಕ 15 ಸಾವಿರ ರೂ. ವೇತನ ನೀಡುವಂತೆ ಸರ್ಕಾರವನ್ನು ಒತ್ತಾಯಿಸಿದರು.

ಸಮುದಾಯ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಪ್ರವೀಣ್ ಮಾತನಾಡಿ, ಹೆಚ್ಚು ಆರೋಗ್ಯ ಶಿಬಿರಗಳನ್ನು ನಡೆಸುವುದರಿಂದ ಸಾರ್ವಜನಿಕರಿಗೆ ಅನುಕೂಲವಾಗುತ್ತದೆ. ರಕ್ತದಾನ ಮಾಡಿದರೆ ರಕ್ತ ಶುದ್ಧಿಯಾಗುತ್ತದೆ. ಯಾವುದೇ ಆತಂಕಪಡದೆ ರಕ್ತದಾನದಲ್ಲಿ ಪಾಲ್ಗೊಳ್ಳುವಂತೆ ಮನವಿ ಮಾಡಿದರು.

ಬೃಹತ್ ರಕ್ತದಾನ ಶಿಬಿರದಲ್ಲಿ ನುಗ್ಗೇಹಳ್ಳಿ ಪೊಲೀಸ್ ಠಾಣೆ ಪಿಎಸ್ಐ ಭರತ್ ರೆಡ್ಡಿ ಹಾಗೂ ಸಿಬ್ಬಂದಿ ರಕ್ತದಾನ ಮಾಡುವ ಮೂಲಕ ಜನರನ್ನು ಪ್ರೇರೇಪಿಸಿದರು. ಬೆಳಗ್ಗೆಯಿಂದ ನಡೆದ ಶಿಬಿರದಲ್ಲಿ ಸುಮಾರು 140 ಜನ ಕಣ್ಣಿನ ಪರೀಕ್ಷೆಗೆ ಒಳಗಾದರೂ ಹಾಗೂ 314 ಜನ ವಿವಿಧ ಕಾಯಿಲೆಗಳ ತಪಾಸಣೆ ಮಾಡಿಸಿದರು. 38 ಜನರು ಸ್ವಯಂ ಪ್ರೇರಿತವಾಗಿ ರಕ್ತದಾನ ಮಾಡಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಹೆಚ್.ಬಿ. ವಿಠಲ್ ಕುಮಾರ್, ಮೈಸೂರು ನಾರಾಯಣ ನೇತ್ರಾಲಯ ಕ್ಯಾನ್ಸರ್ ತಜ್ಞ ಡಾ. ಗುಲ್ಜಾರ್, ಡಾ. ಅರ್ಷಿತ್, ಸಮುದಾಯ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳಾದ ಡಾ. ಸುಹಾಸ್, ಡಾ. ರಮ್ಯ, ರೆಡ್ ಕ್ರಾಸ್ ಸಂಸ್ಥೆ ತಾಲ್ಲೂಕು ಅಧ್ಯಕ್ಷ ಭರತ್ ಕುಮಾರ್, ಸಂಸ್ಥೆ ಕಾರ್ಯದರ್ಶಿ ಜಬಿವುಲ್ಲಾ ಮತ್ತಿತರರಿದ್ದರು.

## 3.55 ಲಕ್ಷ ರೂ. ಬೆಲೆಯ ಚಿನ್ನಾಭರಣ ಕಳವು

ಹಾಸನ: ಮನೆ ಬಾಗಿಲು ಮುರಿದು ಒಳನುಗ್ಗಿರುವ ಕಳ್ಳರು 3.55 ಲಕ್ಷ ರೂ. ಬೆಲೆಯ ಚಿನ್ನ ಹಾಗು ಬೆಳ್ಳಿ ಆಭರಣ ಕಳವು ಮಾಡಿರುವ ಘಟನೆ ದಾಸರಕೊಪ್ಪಲಿನಲ್ಲಿ ಇತ್ತೀಚೆಗೆ ನಡೆದಿದೆ.

ಮನೆ ಮಾಲೀಕ ತಿಮ್ಮಪ್ಪ ಅವರು ತಮ್ಮ ಪುತ್ರಿ ಹಾಗು ಮೊಮ್ಮಗಳನ್ನು ಬಳ್ಳಾರಿಗೆ ಬಿಟ್ಟು ಬರಲು ಮನೆಗೆ ಬೀಗ ಹಾಕಿ ಹೋಗಿದ್ದಾಗ ಘಟನೆ ನಡೆದಿದೆ. ಮನೆ ಬಾಗಿಲು ಬೀಗ ಹಾಕಿರುವುದನ್ನು ಖಚಿತಪಡಿಸಿಕೊಂಡ ಕಳ್ಳರು ಜೂ. 4 ರಾತ್ರಿ ಬಲವಾದ ಆಯುಧದಿಂದ ಬೀಗ ಮುರಿದು ಬೀರುವಿನಲ್ಲಿಟ್ಟಿದ್ದ 10 ಗ್ರಾಂ ತೂಕದ ಚಿನ್ನದ ಸರ, 2 ಗ್ರಾಂ ತೂಕದ ಚಿನ್ನದ ಬ್ರಾಸ್ ಲೈಟ್, 100 ಗ್ರಾಂ ತೂಕದ ಬೆಳ್ಳಿಯ ಕಾಲು ಚೈನ್, 25 ಗ್ರಾಂ ತೂಕದ ಬೆಳ್ಳಿಯ ಕಾಲು ಕಡಗ, 12 ಗ್ರಾಂ ತೂಕದ ಒಂದು ಜೊತೆ ಚಿನ್ನದ ಓಲೆ ಜುಮುಕಿ, 10 ಗ್ರಾಂ ತೂಕದ ಒಂದು ಜೊತೆ ಚಿನ್ನದ ಮಾಟಿ, 5 ಗ್ರಾಂ ತೂಕದ ಒಂದು ಜೊತೆ ಚಿನ್ನದ ಕಿವಿಯ ರಿಂಗ್, 200 ಗ್ರಾಂ ತೂಕದ 5 ಜೊತೆ ಬೆಳ್ಳಿ ಕಾಲು ಚೈನ್, 50 ಗ್ರಾಂ ತೂಕದ ಒಂದು ಜೊತೆ ಬೆಳ್ಳಿಯ ಕಾಲು ಖಡ್ಗ, ಮೊಬೈಲ್ ಅನ್ನು ಕಳವು ಮಾಡಿದ್ದಾರೆ. ಪೆನ್ಷನ್ ಮೊಹಲ್ಲಾ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ವರ್ಕ್ಸ್ ಶಾಪ್ ಕಟ್ಟಡ ಮುರಿದು ಕಳ್ಳತನ

ಅರಸೀಕೆರೆ: ವರ್ಕ್ಸ್ ಶಾಪ್ ಹಿಂಭಾಗದ ಕಾಂಕ್ರಿಟ್ ಒಡೆದು ಒಳನುಗ್ಗಿರುವ ಕಳ್ಳರು 1.33 ಲಕ್ಷ ರೂ. ಮೌಲ್ಯದ ಉಪಕರಣ ಕಳವು ಮಾಡಿರುವ ಘಟನೆ ಮೈಸೂರು ರಸ್ತೆಯ ಗೇಟ್ ವೇ ಇಂಜಿನಿಯರಿಂಗ್ ವರ್ಕ್ಸ್ ಶಾಪ್‌ನಲ್ಲಿ ನಡೆದಿದೆ.

ನಗರದ ಲಕ್ಷ್ಮಿಪುರ ನಿವಾಸಿ ಟಿ.ಸಿ. ಸೋಮಶೇಖರ್ ಎಂಬವರಿಗೆ ಸೇರಿದ ಮಳಿಗೆಯಲ್ಲಿ ಕಳ್ಳತನ ನಡೆದಿದೆ. ರಾತ್ರಿ ವೇಳೆ ಮಳಿಗೆ ಹಿಂಭಾಗದ ಕಾಂಕ್ರಿಟ್ ಕಟ್ಟಡ ಮುರಿದು ಪ್ರವೇಶಿಸಿರುವ ಕಳ್ಳರು 8 ಹೈಡ್ರಾಲಿಕ್ ಜಾಕ್, ಕಬ್ಬಿಣದ ಶೀಟ್, 12 ಬ್ಲೇಡ್ ಕಟ್ಟೆಗಳ ಸಮೇತ ಪರಾರಿಯಾಗಿದ್ದಾರೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಜಿಲ್ಲಾದ್ಯಂತ ಸಣ್ಣ ನೀರಾವರಿ ಇಲಾಖೆ ಗಣತಿ ಆರಂಭ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕಂದಾಯ, ಆರ್ಥಿಕ ಮತ್ತು ಸಾಂಖ್ಯಿಕ, ಸಣ್ಣ ನೀರಾವರಿ, ಜಲ ಸಂಪನ್ಮೂಲ, ಕೃಷಿ, ತೋಟಗಾರಿಕೆ, ಗ್ರಾಮೀಣಾಭಿವೃದ್ಧಿ, ಅಂತರ್ಜಲ ನಿರ್ದೇಶನಾಲಯ, ಕೆ.ಪಿ.ಟಿ.ಸಿ.ಎಲ್. ಇಲಾಖೆಗಳು ಸಮನ್ವಯದೊಂದಿಗೆ ಸಣ್ಣ ನೀರಾವರಿ ಹಾಗೂ ನೀರಿನಾಸರೆಗಳ ಗಣತಿ ಕಾರ್ಯದಲ್ಲಿ ನಿಖರವಾದ ಮಾಹಿತಿ ಸಂಗ್ರಹಣೆಗೆ ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಸಿ. ಸತ್ಯಭಾಮ ಸೂಚಿಸಿದ್ದಾರೆ.



ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ 7ನೇ ಸಣ್ಣ ನೀರಾವರಿ ಗಣತಿ ಮತ್ತು 2ನೇ ನೀರಿನಾಸರೆಗಳ ಗಣತಿ ಕಾರ್ಯದ ಬಗ್ಗೆ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ತಾಲ್ಲೂಕು ಮಟ್ಟದಲ್ಲಿ ಗಣತಿ ಕಾರ್ಯ ಕುರಿತು ತರಬೇತಿ ನೀಡಲಾಗುವುದು. ತರಬೇತಿಯಲ್ಲಿ ತಿಳಿಸಿದ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ನಿಖರ ಹಾಗೂ ನಿರ್ದಿಷ್ಟ ಮಾಹಿತಿ ದಾಖಲಿಸುವಂತೆ ತಿಳಿಸಿದರು.

ಪ್ರಸ್ತುತ 2023-24ನೇ ವರ್ಷವನ್ನಾಧರಿಸಿ 7ನೇ ಸಣ್ಣ ನೀರಾವರಿ ಹಾಗೂ 2ನೇ ನೀರಿನಾಸರೆಗಳ (ಚಿಣಡಿ :ಜ) ಗಣತಿಯನ್ನು ಪ್ರಥಮ ಬಾರಿಗೆ ಮೊಬೈಲ್ ಆ್ಯಪ್ ಬಳಸಿ ಕೈಗೊಳ್ಳಲಾಗುತ್ತಿದೆ. ಪ್ರಸ್ತುತ ಗಣತಿ ಕಾರ್ಯಕ್ಕೆ ತಾಲ್ಲೂಕು ಮಟ್ಟದಲ್ಲಿ ಸಂಬಂಧಪಟ್ಟ ಸಿಬ್ಬಂದಿಗೆ ತರಬೇತಿ ಏರ್ಪಡಿಸಲು ದಿನಾಂಕಗಳನ್ನು ಗೊತ್ತುಪಡಿಸಲಾಗುವುದುಎಂದರು.

ರಾಜ್ಯದ ಹಿತದೃಷ್ಟಿಯಿಂದ ಸಂಬಂಧಿಸಿದ ಇಲಾಖೆಗಳ ಅಧಿಕಾರಿ/ನೌಕರರ ಸಮನ್ವಯದೊಂದಿಗೆ ಗಣತಿ ಕ್ಷೇತ್ರ ಕಾರ್ಯವನ್ನುಅಭಿಯಾನವಾಗಿ ಪರಿಗಣಿಸಿ ಸಕಾಲದಲ್ಲಿ ಯಶಸ್ವಿಯಾಗಿ ಪೂರ್ಣಗೊಳಿಸಲು ಪರಸ್ಪರ ಸಹಕಾರ ನೀಡುವುದು ಅವಶ್ಯ ಎಂದು ತಿಳಿಸಿದರು.

ಅಂತರ್ಜಲ ಯೋಜನೆಗಳು ಹಾಗೂ ಮೇಲ್ಮೈ ಯೋಜನೆಗಳು ಎಂದು ವರ್ಗೀಕರಿಸಲಾಗಿದೆ. 0 ರಿಂದ 40 ಹೆಕ್ಟೇರ್‌ಅಚ್ಚುಕಟ್ಟು ಇರುವ ಯೋಜನೆಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಅಧೀನದಲ್ಲಿರುತ್ತದೆ. 40 ಹೆಕ್ಟೇರ್‌ಗೆ ಮೇಲ್ಪಟ್ಟು 2000 ಹೆಕ್ಟೇರ್ ವರೆಗಿನ ಅಚ್ಚುಕಟ್ಟು ಇರುವ ಯೋಜನೆಗಳು ಸಣ್ಣ ನೀರಾವರಿ ಇಲಾಖೆ ಅಧೀನದಲ್ಲಿರುತ್ತವೆ. 2000 ಹೆಕ್ಟೇರ್‌ಗಳಿಗೆ ಮೇಲ್ಪಟ್ಟು ಅಚ್ಚುಕಟ್ಟು ಇರುವ ಯೋಜನೆಗಳು ಬೃಹತ್ ನೀರಾವರಿ ಇಲಾಖೆಯ ಅಧೀನದಲ್ಲಿರುತ್ತವೆ ಎಂದು ತಿಳಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಬಿ.ಆರ್. ಪೂರ್ಣಿಮಾ ಮಾತನಾಡಿ, ಗ್ರಾಮ ಪಂಚಾಯಿತಿ ಅಧಿಕಾರಿಗಳು ಗಣತಿ ಕಾರ್ಯಕ್ಕೆ ಸಹಕರಿಸುವಂತೆ ನಿರ್ದೇಶನ ನೀಡಲಾಗುವುದು ಎಂದು ತಿಳಿಸಿದರು.

ಸಣ್ಣ ನೀರಾವರಿ ಇಲಾಖೆಯ ಕಾರ್ಯಪಾಲಕ ಅಭಿಯಂತರ ರಾಮಚಂದ್ರ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

## ರಸ್ತೆ ಅಪಘಾತ ತಡೆಗೆ ಕಠಿಣ ಕ್ರಮಕ್ಕೆ ಸೂಚನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯಲ್ಲಿ ರಸ್ತೆ ಅಪಘಾತ ತಡೆಗಟ್ಟುವ ನಿಟ್ಟಿನಲ್ಲಿ ಬ್ಲಾಕ್‌ಸ್ಪಾಟ್ ಗಳನ್ನು ಗುರುತಿಸಿ ಅಗತ್ಯ ಸುರಕ್ಷತಾ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ. ಸತ್ಯಭಾಮ ಅಧಿಕಾರಿಗಳಿಗೆ ಸೂಚಿಸಿದರು.



ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ರಸ್ತೆ ಸುರಕ್ಷಾತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕಳೆದ ವರ್ಷ ಎಲ್ಲೆಲ್ಲಿ ಅಪಘಾತ ಸಂಭವಿಸಿವೆ ಎಂಬುದರ ಬಗ್ಗೆ ಗಮನಹರಿಸಿ ಪರಿಶೀಲನೆ ಮಾಡಿ ಗುರುತಿಸಿದ್ದ ಬ್ಲಾಕ್ ಸ್ಪಾಟ್‌ಗಳಲ್ಲಿ ಅಪಘಾತಗಳು ಸಂಭವಿಸದಂತೆ ಎಚ್ಚರಿಕೆ ವಹಿಸಿ ಕೆಲಸ ಮಾಡಲಾಗಿದೆಯೇ ಎಂಬುದನ್ನು ಪರಿಶೀಲಿಸಿ ಎಂದರು.

ನಗರ ಪ್ರದೇಶಗಳಲ್ಲಿ ಸಂತೆ ನಡೆಯುತ್ತಿರುವ ಸ್ಥಳಗಳಲ್ಲಿ ಸಂಭವಿಸುವ ಅಪಘಾತಗಳನ್ನು ತಡೆಗಟ್ಟಲು ಮುಂಜಾಗ್ರತೆ ವಹಿಸಿ ಸಂತೆ ಸ್ಥಳಾಂತರ ಮಾಡಲು ಜಾಗ ಗುರುತಿಸಿ ಎಂದು ಮಹಾನಗರ ಪಾಲಿಕೆ ಆಯುಕ್ತರಿಗೆ ನಿರ್ದೇಶನ ನೀಡಿದರು.

ರಾಷ್ಟ್ರೀಯ ಹೆದ್ದಾರಿಯಲ್ಲಿ ಹೆಚ್ಚು ಅಪಘಾತ ಸಂಭವಿಸುತ್ತಿವೆ. ಈ ನಿಟ್ಟಿನಲ್ಲಿ ಎಚ್ಚರಿಕೆ ವಹಿಸಿ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕು. ಸರಿಯಾದ ರೀತಿಯಲ್ಲಿ ನಿರ್ವಹಣೆ ಮಾಡುವಂತೆ ಎನ್.ಹೆಚ್.ಎ.ಐ. ಅಧಿಕಾರಿಗಳಿಗೆ ಸೂಚಿಸಿದರು.

ಎನ್.ಹೆಚ್.ಎ.ಐ., ಲೋಕೋಪಯೋಗಿ, ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿಗಳಲ್ಲಿ ಅಪಘಾತ ಸಂಭವಿಸುವ ಕುರಿತು ಪ್ರತ್ಯೇಕವಾಗಿ ಬ್ಲಾಕ್ ಸ್ಪಾಟ್ ಗಳನ್ನು ಗುರುತಿಸಿ ಎಂದ ಜಿಲ್ಲಾಧಿಕಾರಿ, ಬ್ಲಾಕ್ ಸ್ಪಾಟ್ ವ್ಯಾಪ್ತಿಯಲ್ಲಿನ ಪೊಲೀಸ್ ಠಾಣೆಯ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯಿತಿ ಪಿ.ಡಿ.ಓ. ಗಳಿಗೂ ಮಾಹಿತಿ ಇರುವಂತೆ ನೋಡಿಕೊಳ್ಳಿ ಎಂದು ತಿಳಿಸಿದರು.

ನಗರ ಪ್ರದೇಶಗಳಲ್ಲಿ ವಾಹನಗಳನ್ನು ಅಡ್ಡಾದಿಡ್ಡಿಯಾಗಿ ಪಾರ್ಕಿಂಗ್ ಮಾಡುತ್ತಾರೆ. ಈ ಬಗ್ಗೆ ಪೊಲೀಸ್ ಇಲಾಖೆ ಅಧಿಕಾರಿಗಳು ಗಮನಹರಿಸಿ ಎಂದು ಸೂಚಿಸಿದರು.

ಅಂಬುಲೆನ್ಸ್‌ಗಳು ಟೋಲ್‌ಗಳಲ್ಲಿ ಯಾವುದೇ ಅಡೆತಡೆ ಆಗದಂತೆ ಸಾಗಲು ಅಗತ್ಯ ಕ್ರಮ ಕೈಗೊಳ್ಳುವಂತೆ ಎನ್‌ಹೆಚ್.ಎ.ಐ. ಅಧಿಕಾರಿಗಳಿಗೆ ಸೂಚಿಸಿದರು.

ಕೆ.ಎಸ್.ಆರ್.ಟಿ.ಸಿ. ಬಸ್ ಚಾಲಕರಿಗೆ ಸಂಚಾರಿ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ತರಬೇತಿ ನೀಡಲು ಕ್ರಮ ವಹಿಸುವಂತೆ ವಿಭಾಗಾಧಿಕಾರಿಗೆ ತಿಳಿಸಿದರು.

ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿಗಳಾದ ಚಂದ್ರಶೇಖರ್, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯಂತರ ಗಿರೀಶ್, ಪ್ರಾದೇಶಿಕ ಸಾರಿಗೆ ಅಧಿಕಾರಿ ರಾಜ್ ಕುಮಾರ್, ಮಹಾ ನಗರ ಪಾಲಿಕೆ ಆಯುಕ್ತ ರಮೇಶ್ ಹಾಗೂ ಇತರರಿದ್ದರು.



ಹಾಸನ: ಆಧುನಿಕ ಶಿಕ್ಷಣ ಪದ್ಧತಿಯಲ್ಲಿ ರಾಷ್ಟ್ರೀಯತೆಗೆ ಆದ್ಯತೆ ನೀಡಬೇಕು. ಮಕ್ಕಳಿಗೆ ರಾಷ್ಟ್ರ ಪ್ರೇಮ ಮೂಡಿಸಿದರೆ ಅಭಿವೃದ್ಧಿಗೆ ಪೂರಕವಾಗುತ್ತದೆ ಎಂದು ಲೇಖಕಿ ಪ್ರತಿಮಾ ಹಾಸನ್ ಹೇಳಿದರು.

ಶಾಲೆಯ ಕಾರ್ಯದರ್ಶಿ ಶೋಭಾ ನಾಗರಾಜ್, ಮುಖ್ಯೋಪಾಧ್ಯಾಯ ನವೀನ್, ಸಂಧ್ಯಾ ಹಾಗೂ ಇತರರಿದ್ದರು.

## ಇತಿಹಾಸದಲ್ಲಿ ಈ ದಿನ

### ಜೂನ್ - 8

**1936:** ಆಲ್ ಇಂಡಿಯಾ ರೇಡಿಯೋ ಸ್ಥಾಪನೆ, ಭಾರತೀಯ ರಾಜ್ಯ ಪ್ರಸರಣ ಸೇವೆಯನ್ನು ಅಧಿಕೃತವಾಗಿ ಆಲ್ ಇಂಡಿಯಾ ರೇಡಿಯೋ ಎಂದು ಮರುನಾಮಕರಣ ಮಾಡಲಾಯಿತು.

**1948:** ಏರ್ ಇಂಡಿಯಾದ ಮೊದಲ ಅಂತಾರಾಷ್ಟ್ರೀಯ ವಿಮಾನಯಾನ. ಮಲಬಾರ್ ಪ್ರಿನ್ಸೆಸ್ ಎಂಬ ಹೆಸರಿನ ಲಾಕ್‌ಹೀಡ್ -749 ಕಾನ್ಸ್ಟೆಲೇಶನ್ ವಿಮಾನವು ಮುಂಬೈನಿಂದ ಲಂಡನ್‌ಗೆ (ಕೈರೋ ಮತ್ತು ಜೆನೀವಾ ಮೂಲಕ) ತನ್ನ ಮೊದಲ ಅಂತಾರಾಷ್ಟ್ರೀಯ ಪ್ರಯಾಣ ಆರಂಭಿಸಿತು. ಈ ವಿಮಾನಯಾನವು ಭಾರತದ ವಿಮಾನಯಾನ ಇತಿಹಾಸದಲ್ಲಿ ಪ್ರಮುಖ ಮೈಲಿಗಲ್ಲು ಆಗಿದೆ.

**1658:** ಔರಂಗಜೇಬ್‌ನಿಂದ ಆಗ್ರಾ ಕೋಟೆ ವಶ. ಔರಂಗಜೇಬ್ ತನ್ನ ತಂದೆ ಶಾಹ್ ಜಹಾನ್ ಅವರನ್ನು ಆಗ್ರಾ ಕೋಟೆಯಲ್ಲಿ ಬಂಧಿಸಿ, ಮುಘಲ್ ಸಾಮ್ರಾಜ್ಯದ ಅಧಿಕಾರ ಸ್ವಾಧೀನಪಡಿಸಿಕೊಂಡ.

**1975:** ಗೀತಾ ರಹಸ್ಯ ಪ್ರಕಟಣೆ. ಲೋಕಮಾನ್ಯ ತಿಲಕ್ ರಚಿಸಿದ ಟಗೀತಾ ರಹಸ್ಯಟ ಎಂಬ ಗ್ರಂಥವನ್ನು ಪ್ರಕಟಿಸಲಾಯಿತು. ಈ ಕೃತಿ ಭಾರತೀಯ ಸ್ವಾತಂತ್ರ್ಯ ಹೋರಾಟದ ಸಮಯದಲ್ಲಿ ಮಹತ್ವಪೂರ್ಣವಾದ ಆಧ್ಯಾತ್ಮಿಕ ಮತ್ತು ರಾಜಕೀಯ ಪ್ರೇರಣೆಯಾಗಿ ಪರಿಣಮಿಸಿತು.

**ಜನನ**

**1957:** ಡಿಂಪಲ್ ಕಪಾಡಿಯಾ, ಪ್ರಸಿದ್ಧ ಬಾಲಿವುಡ್ ನಟಿ.

**1975:** ಶಿಲ್ಪಾ ಶೆಟ್ಟಿ, ಬಾಲಿವುಡ್ ನಟಿ ಮತ್ತು ಉದ್ಯಮಿ.

**ಮರಣ**

**2009:** ಹಬೀಬ್ ತನುವೀರ್, ಹಬೀಬ್ ತನುವೀರ್ ಅವರು ಭಾರತೀಯ ನಾಟಕಕಾರ, ನಿರ್ದೇಶಕ ಮತ್ತು ನಟರಾಗಿದ್ದರು. ಅವರು ನವೀನ ನಾಟಕ ಶೈಲಿಯೊಂದಿಗೆ ಜನಪದ ಕಲೆಯ ಸಂಯೋಜನೆ ಮಾಡಿದರು.

**2012:** ಕೆ.ಎಸ್.ಆರ್. ದಾಸ್, ತೆಲುಗು, ಕನ್ನಡ ಮತ್ತು ತಮಿಳು ಚಿತ್ರರಂಗಗಳಲ್ಲಿ ಪ್ರಸಿದ್ಧ ನಿರ್ದೇಶಕರಾಗಿದ್ದರು.


**2015:** ದಾಸರಥಿ ರಂಗಾಚಾರ್ಯ, ತೆಲುಗು ಭಾಷೆಯ ಪ್ರಸಿದ್ಧ ಲೇಖಕರಾಗಿದ್ದರು.

**2024:** ರಾಮೋಜಿ ರಾವ್ ಅವರು ಭಾರತೀಯ ಉದ್ಯಮಿ, ಪತ್ರಕರ್ತ ಮತ್ತು ಚಿತ್ರ ನಿರ್ಮಾಪಕರಾಗಿದ್ದರು.

## ಗಾಯಾಳುಗಳ ಆರೋಗ್ಯ ವಿಚಾರಿಸಿದ ಶಾಸಕ ಸಿಮೆಂಟ್ ಮಂಜು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಆರ್‌ಸಿಬಿ ವಿಜಯೋತ್ಸವ ಸಂದರ್ಭದಲ್ಲಿ ಉಂಟಾದ ಕಾಲ್ತುಳಿತದಿಂದ ಯುವಕರು ಮೃತಪಟ್ಟಿದ್ದು ದು:ಖ ತರಿಸಿದೆ ಎಂದು ರಾಜ್ಯ ಬಿಜೆಪಿ ಎಸ್‌ಸಿ ಮೋರ್ಚಾ ಅಧ್ಯಕ್ಷ ಹಾಗು ಶಾಸಕ ಸಿಮೆಂಟ್ ಮಂಜು ಅವರು ಹೇಳಿದರು.



ಬೆಂಗಳೂರಿನ ಬೌರಿಂಗ್ ಆಸ್ಪತ್ರೆಯಲ್ಲಿ ಗಾಯಾಳುಗಳ ಆರೋಗ್ಯ ವಿಚಾರಿಸಿ ಮಾತನಾಡಿದ ಅವರು, ಬೇರೆ ಯಾವ ತಂಡಕ್ಕೂ ಇರದ ಅಭಿಮಾನಿಗಳು ಆರ್‌ಸಿಬಿಗೆ ಇದ್ದಾರೆ. 18 ವರ್ಷಗಳ ನಂತರ ತಂಡ ಟ್ರೋಫಿ ಗೆದ್ದಿದೆ. ಆದರೆ ಅದೇ ಸಂಭ್ರಮ ರಾಜ್ಯದ ಪಾಲಿಗೆ ಕಹಿ ಅನುಭವ ನೀಡಿದೆ ಎಂದರು.

ಜೂ. 3ರ ಫೈನಲ್ ಪಂದ್ಯದ ದಿನ ರಾತ್ರಿಪೂರ್ತಿ ನಗರದ ಎಲ್ಲಾ ಕಡೆ ಸಂಭ್ರಮಾಚರಣೆಗಳು ನಡೆದಿದ್ದು. ಅದಕ್ಕೆ ಭದ್ರತೆ ಒದಗಿಸಿದ್ದ ಪೊಲೀಸರು ಹೈರಾಣಾಗಿದ್ದರು. ಇದರ ಬೆನ್ನಲ್ಲೇ ಮಾರನೇ ದಿನ ಚಿನ್ನಸ್ವಾಮಿ ಸ್ಟೇಡಿಯಂ ಹಾಗು ವಿಧಾನಸೌಧ ಆವರಣದಲ್ಲಿ ವಿಜಯೋತ್ಸವ ಹಮ್ಮಿಕೊಳ್ಳಲಾಯಿತು. ಸರ್ಕಾರದ ಆತುರದ ನಿರ್ಧಾರಕ್ಕೆ ಅಮಾಯಕರು ಬಲಿಯಾಗಬೇಕಾಯಿತು. ಪೂರ್ವ ಸಿದ್ಧತೆಯೊಂದಿಗೆ ಸಮಾರಂಭ ಮಾಡಿದ್ದರೆ ಪರಿಸ್ಥಿತಿ ಇಷ್ಟು ಹದಗೆಡುತ್ತಿರಲಿಲ್ಲ ಎಂದರು.

ಈ ಎಲ್ಲಾ ಅವಾಂತರಗಳಿಗೆ ಸರ್ಕಾರವೇ ನೇರ ಹೊಣೆಯಾಗಿದೆ. ರಾಜ್ಯದ ಮುಖ್ಯಮಂತ್ರಿ ಹಾಗು ಉಪಮುಖ್ಯಮಂತ್ರಿ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು. ಮೃತ ಕುಟುಂಬಗಳಿಗೆ ಹೆಚ್ಚಿನ ಪರಿಹಾರ ನೀಡಬೇಕು. ಗಾಯಾಳುಗಳ ಚಿಕಿತ್ಸಾ ವೆಚ್ಚವನ್ನು ಸರ್ಕಾರವೇ ಭರಿಸಬೇಕು ಎಂದು ಒತ್ತಾಯಿಸಿದರು.

## ನಾಗರಿಕ ಸನ್ಮಾನಕ್ಕೆ ನಿರೀಕ್ಷೆಗೂ ಮೀರಿ ಸ್ಪಂದನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಅಂತರಾಷ್ಟ್ರೀಯ ಬೂಕರ್ ಪ್ರಶಸ್ತಿಗೆ ಭಾಜನರಾದ ಹಿರಿಯ ಸಾಹಿತಿ ಬಾನು ಮುಷ್ತಾಕ್ ಹಾಗು ದೀಪಾ ಭಾಸ್ತಿ ಅವರಿಗೆ ಜೂ. 9ರ ಸೋಮವಾರ ನಗರದಲ್ಲಿ ನಾಗರಿಕ ಸನ್ಮಾನ ಹಮ್ಮಿಕೊಂಡಿದ್ದು ಎಲ್ಲಾ ಕಡೆಯಿಂದ ಉತ್ತಮ ಸ್ಪಂದನೆ ವ್ಯಕ್ತವಾಗಿದೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ಎಚ್.ಎಲ್. ಮಲ್ಲೇಶಗೌಡ ತಿಳಿಸಿದರು.





ಸುದ್ದಿಗೋಷ್ಠಿಯಲ್ಲಿ ಶನಿವಾರ ಮಾತನಾಡಿ, ನಗರದ ಹಾಸನಾಂಬ ಕ್ಷೇತ್ರದಲ್ಲಿ ಅಂದು ಬೆಳಿಗ್ಗೆ 11 ಗಂಟೆಗೆ ಸಮಾರಂಭ ಪ್ರಾರಂಭವಾಗಲಿದೆ. ಬೆಳಿಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿ ಕಚೇರಿ ಆವರಣದಿಂದ ವಿವಿಧ ಜನಪದ ಕಲಾತಂಡಗಳೊಂದಿಗೆ ಸಾಂಸ್ಕೃತಿಕ ಮೆರವಣಿಗೆ ನಡೆಯಲಿದೆ. ನಾಡೋಜ ಡಾ. ಬರಗೂರು ರಾಮಚಂದ್ರಪ್ಪ ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡುವರು. ಸಾಹಿತಿ ಡಾ. ಹೆಚ್.ಎಸ್. ಅನುಪಮಾ ಅಭಿನಂದನಾ ನುಡಿಗಳನ್ನಾಡುವರು. ಸಂಸದ ಶ್ರೇಯಸ್ ಪಟೇಲ್, ಶಾಸಕ ಹೆಚ್.ಪಿ. ಸ್ವರೂಪ್, ಮಹಾನಗರ ಪಾಲಿಕೆ ಅಧ್ಯಕ್ಷ ಎಂ. ಚಂದ್ರೇಗೌಡ, ಜಿಲ್ಲಾಧಿಕಾರಿ ಸಿ. ಸತ್ಯಭಾಮ, ಜಿಲ್ಲಾ ಪಂಚಾಯತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಬಿ.ಆರ್. ಪೂರ್ಣಿಮಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮದ್ ಸುಜೀತಾ ಮತ್ತಿತರರು ಪಾಲ್ಗೊಳ್ಳಲಿದ್ದಾರೆ ಎಂದರು. ಕನ್ನಡ ಸಾಹಿತ್ಯ ಲೋಕವನ್ನು ಶ್ರೀಮಂತಗೊಳಿಸಿದ ಕೀರ್ತಿ ಬಾನು ಮುಷ್ತಾಕ್ ಅವರಿಗೆ ಸಲ್ಲುತ್ತದೆ. ಅದೇ ರೀತಿ ಎದೆಯ ಹಣತೆ ಕಥಾ ಸಂಕಲನವನ್ನು ಇಂಗ್ಲಿಷ್‌ಗೆ ಅನುವಾದ ಮಾಡಿ ಜಗತ್ತಿಗೆ ಪರಿಚಯಿಸಿದ ಪಕ್ಕದ ಕೊಡಗಿನವರಾದ ದೀಪಾ ಭಾಸ್ತಿ ಅವರನ್ನು ಇದೇ ವೇಳೆ ಸನ್ಮಾನಿಸಲಾಗುವುದು ಎಂದರು.

ದಲಿತ ಮುಖಂಡರಾದ ಎಂ.ಜಿ. ಪೃಥ್ವಿ, ರಮೇಶ್, ಕೆಪಿಆರ್‌ಎಸ್ ಜಿಲ್ಲಾಧ್ಯಕ್ಷ ಹೆಚ್.ಆರ್. ನವೀನ್ ಕುಮಾರ್, ಕಸಾಪ ಗೌರವ ಕಾರ್ಯದರ್ಶಿ ಬಿ.ಆರ್. ಬೊಮ್ಮೇಗೌಡ, ತೌಫಿಕ್ ಮತ್ತಿತರರಿದ್ದರು.

## ಗೌರವಯುತ ಬದುಕು ಮನುಷ್ಯನ ಆದ್ಯತೆಯಾಗಲಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ಜೀವನದಲ್ಲಿ ಧರ್ಮ, ಅರ್ಥ, ಕಾಮ ಮತ್ತು ಮೋಕ್ಷ ಎಂಬ ಚತುರ್ವಿಧ ಪುರುಷಾರ್ಥಗಳನ್ನು ಮನುಷ್ಯ ಅಳವಡಿಸಿಕೊಳ್ಳಬೇಕು. ಸಂಪತ್ತಿಗಿಂತ ಸಂಪ್ರದಾಯ ಮುಖ್ಯ ಎಂದು ಶ್ರೀ ರಂಭಾಪುರಿ ಮಠದ ಡಾ. ಶ್ರೀ ವೀರಸೋಮೇಶ್ವರ ಸ್ವಾಮೀಜಿ ತಿಳಿಸಿದರು.



ಕಾರ್ಜುವಳ್ಳಿ ಗ್ರಾಮದಲ್ಲಿರುವ ಶ್ರೀಮದ್ ರಂಭಾಪುರಿ ವೀರಾ ಸಿಂಹಾಸನ ಶಾಖಾ ಶ್ರೀ ಸಂಸ್ಥಾನ ಹಿರೇಮಠದಲ್ಲಿ ಮನೆ ಮನೆಗೆ ರೇಣುಕ ಮನ ಮನಕೆ ರೇಣುಕ ತತ್ವ ಪ್ರಚಾರ ಅಭಿಯಾನದ ರಜತ ಸಂಚಿಕೆ ಬಿಡುಗಡೆ ಮಾಡಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಭೌತಿಕ ಸಂಪನ್ಮೂಲಗಳಾಗಲಿ, ಸಿರಿ ಸಂಪತ್ತಿನ ಸಂಗ್ರಹವಾಗಲಿ ಮಾನವನಿಗೆ ಸಂತೃಪ್ತಿ ಸಮಾಧಾನ ತರಲಾರವು. ವೀರಶೈವ-ಲಿಂಗಾಯತ ಹಿಂದು ಧರ್ಮದ ಅವಿಭಾಜ್ಯ ಅಂಗ. ಇವೆರಡರಲ್ಲಿ ದ್ವಂದ್ವ ಹುಟ್ಟು ಹಾಕುವ ಕೆಲಸ ಯಾರೂ ಮಾಡಬಾರದು. ವೀರಶೈವ ಸೈದ್ಧಾಂತಿಕ ಪದವಾಗಿದ್ದು, ಲಿಂಗಾಯತ ರೂಢಿಯಿಂದ ಬಂದಿರುವುದಾಗಿದೆ. ಆದ್ದರಿಂದ ಜನಗಣತಿ, ಜಾತಿ ಗಣತಿ ಸಂದರ್ಭದಲ್ಲಿ ವೀರಶೈವ ಲಿಂಗಾಯತ ಎಂದು ಎಲ್ಲರೂ ಬರೆಸುವ ಅವಶ್ಯಕತೆ ಇದೆ. ಒಳಪಂಗಡದಲ್ಲಿ ಯಾವುದೇ ಜಾತಿ ಬರೆದರೂ ಅದು ವೀರಶೈವ ಲಿಂಗಾಯತ ಎಂದೆ ತಿಳಿಯಬೇಕು ಎಂದರು.

ಕಾರ್ಜುವಳ್ಳಿ ಹಿರೇಮಠದ ಸದಾಶಿವ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಅಶಾಂತಿಯಿಂದ ಬಳಲುವ ಜನತೆಗೆ ಆಧ್ಯಾತ್ಮದ ಜ್ಞಾನದ ಅರಿವು ಮೂಡಿಸುವುದೆ ಸಮಾರಂಭದ ಮೂಲ ಉದ್ದೇಶವಾಗಿದೆ. ಭಕ್ತರ ಸಹಕಾರ-ಜಗದ್ಗುರುಗಳವರ ಆಶೀರ್ವಾದ ಬಲದಿಂದ ಶ್ರೀ ಮಠದ ಪರಿಸರದಲ್ಲಿ ಅನೇಕ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿರುವುದು ಸಂತೃಪ್ತಿ ಯಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಜೀವನದಲ್ಲಿ ಅನುಭವಗಳು ಕಲಿಸುವಷ್ಟು ಪಾಠಗಳನ್ನು ಯಾವುದೇ ವಿಶ್ವ ವಿದ್ಯಾಲಯಗಳು ಕಲಿಸಲಾರವು ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ ನಾಗೇಂದ್ರ, ಮಾತನಾಡಿ, ಧರ್ಮಕ್ಕೆ ಮನುಷ್ಯ ತಲೆ ಬಾಗಬೇಕೆ ಹೊರತು ದುಷ್ಟರಿಗಲ್ಲ. ಮಾನವೀಯತೆಗೆ ತಲೆ ಬಾಗಬೇಕೆ ಹೊರತು ಅವಿವೇಕಿಗಳಿಗಲ್ಲ ಎಂದರು. ಇದೇ ಸಂದರ್ಭದಲ್ಲಿ ಕಡೇನಂದಿಹಳ್ಳಿ ರೇವಣಸಿದ್ದೇಶ್ವರ ಶ್ರೀಗಳು, ಸಂಗೊಳ್ಳಿ ಗುರುಲಿಂಗ ಶ್ರೀಗಳು, ಹಾರನಹಳ್ಳಿ ಶಿವಯೋಗಿ ಶ್ರೀಗಳು, ಸಂಕಲಾಪುರದ ಧರ್ಮರಾಜೇಂದ್ರ ಶ್ರೀಗಳು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು.

ಸಂಸದ ಶ್ರೇಯಸ್ ಪಟೇಲ್, ಶಾಸಕ ಸಿಮೆಂಟ್ ಮಂಜು, ತಾಲ್ಲೂಕು ಜೆಡಿಎಸ್ ಅಧ್ಯಕ್ಷ ಕೆ.ಎಸ್.ಮಂಜೇಗೌಡ, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ನಟರಾಜ್ ನಾಕಲಗೂಡು, ಕಾಂಗ್ರೆಸ್ ಮುಖಂಡ ಮುರುಳಿ ಮೋಹನ್, ಎಂ.ಎಸ್. ಮಹೇಶ್, ಬಿ.ರೇಣುಕಪ್ರಸಾದ್, ಡಿ.ಎಸ್. ಜಯಣ್ಣ, ಡಾ. ಎಂ.ಈ. ಜಯರಾಜ್, ವೈ.ಬಿ. ಟೀಕರಾಜ್, ಅಖಿಲ ಅಜಿತ್ ಚಿಕ್ಕಣಗಾಲ್, ಶಾಂತಪ್ಪ ದೇವರಮನೆ, ಕೆ.ಶಾಂತರಾಜ್ ಕೆರೆಹಳ್ಳಿ, ಎಂ.ಜೆ. ಬಸವಣ್ಣ, ಸಿ.ಎಸ್. ಮಹೇಶ್, ನಾಗರಾಜು, ವಿನೋದಕುಮಾರ್, ಎಸ್. ಎಸ್. ಶಿವಮೂರ್ತಿ, ಡಿ. ಎ. ದೇವರಾಜ ಶಾಸ್ತ್ರಿ ಇತರರಿದ್ದರು.

## ಬಡ ಮಕ್ಕಳಿಗೆ ನೆರವು

ಶ್ರೀ ಸಂಸ್ಥಾನ ಹಿರೇಮಠ ಕಾರ್ಜುವಳ್ಳಿಯಿಂದ ಸಮಾಜದಲ್ಲಿ ಆರ್ಥಿಕವಾಗಿ ಹಿಂದುಳಿದ ಬಡ ಕುಟುಂಬದ ವಿದ್ಯಾರ್ಥಿಗಳ ಉನ್ನತ ವ್ಯಾಸಂಗಕ್ಕಾಗಿ ಕಳೆದ ಎರಡು ವರ್ಷಗಳಿಂದ 25 ಸಾವಿರ ರೂ. ಧನ ಸಹಾಯ ಮಾಡಲಾಗುತ್ತಿದೆ. ಕಳೆದ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ಮಡಬಲು ಗ್ರಾಮದ ಕೃಪಾ ಎಂಬ ವಿದ್ಯಾರ್ಥಿನಿಗೆ, ಹೆಚ್‌ಡಿಸಿಸಿ ಬ್ಯಾಂಕ್ ನಿರ್ದೇಶಕ ಕಬ್ಬಿನಹಳ್ಳಿ ಜಗದೀಶ್ ವೈಯಕ್ತಿಕವಾಗಿ ಶ್ರೀ ಮಠದ ಆವರಣದಲ್ಲಿ ಜರುಗಿದ ಕಾರ್ಯಕ್ರಮದಲ್ಲಿ ನೀಡಿದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248